ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 85 Monday **21-09-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 85 ಸೋಮವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಮಳೆ ಕೈಕೊಟ್ಟರೂ ರಾಗಿ ಕೈಬಿಡದ ರೈತರು!

ಬೆಳೆ ಉಳಿಸಿಕೊಳ್ಳಲು ಟ್ಯಾಂಕರ್ ನೀರಿನ ಮೊರೆ; ಕಾಳು ಕಟ್ಟುವ ಹಂತದಲ್ಲಿ ಬರದ ಹೊಡೆತ

"ಮುಂಜಾನೆಯ ಮೆರಗು"

ಜಗಳೂರು ಸೆ. 20– ಮುಂಗಾರು ಮಳೆ ಕೈಕೊಟ್ಟ ಪರಿಣಾಮ ತಾಲೂಕಿನಾದ್ಯಂತ ರಾಗಿ ಬೆಳೆ ಒಣಗುವ ಆತಂಕ ಎದುರಾಗಿದ್ದು, ಬೆಳೆ ಉಳಿಸಿಕೊಳ್ಳಲು ಕೆಲ ರೈತರು ಟ್ಯಾಂಕರ್ ಮೂಲಕ ನೀರು ಹಾಯಿಸುವ ಅನಿವಾರ್ಯತೆಗೆ ಸಿಲುಕಿದ್ದಾರೆ. ಮಳೆಯನ್ನೇ ಅವಲಂಬಿಸಿ ರಾಗಿ ಬಿತ್ತನೆ ಮಾಡಿದ್ದ ರೈತರಿಗೆ ಇದೀಗ ಮಳೆ ಬಾರದಿರುವುದು ಗಾಯದ ಮೇಲೆ ಬರೆ ಎಳೆದಂತಾಗಿದೆ.

ತಾಲೂಕಿನಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಸುಮಾರು 18 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ರಾಗಿ ಬಿತ್ತನೆ ಮಾಡಲಾಗಿದೆ. ಕಸಬಾ, ಸೊಕ್ಕೆ ಹಾಗೂ ಬಿಳಿಚೋಡು ಹೋಬಳಿ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ರಾಗಿ ಬೆಳೆಯಲಾಗಿದೆ. ಆರಂಭದಲ್ಲಿ ಮಳೆ ಕೈಹಿಡಿದಿದ್ದರಿಂದ ಉತ್ತಮ ಇಳುವರಿಯ ನಿರೀಕ್ಷೆಯಲ್ಲಿದ್ದ ರೈತರು ಇದೀಗ ಮಳೆಗಾಗಿ ಆಕಾಶದತ್ತ ನೋಡುವಂತಾಗಿದೆ.

ಕಾಳು ಕಟ್ಟುವ ಹಂತದಲ್ಲೇ ನೀರಿನ ಕೊರತೆ

ರಾಗಿ ಬೆಳೆ ಸದ್ಯ ಕಾಳು ಕಟ್ಟುವ ನಿರ್ಣಾಯಕ ಹಂತಕ್ಕೆ ತಲುಪಿದೆ. ಇದೇ ಸಂದರ್ಭದಲ್ಲಿ ಮಳೆ ಸಂಪೂರ್ಣವಾಗಿ ಕೈಕೊಟ್ಟಿರುವುದರಿಂದ ಗಿಡಗಳಲ್ಲಿ ತೇವಾಂಶ ಕಡಿಮೆಯಾಗುತ್ತಿದ್ದು, ಎಲೆಗಳು ಒಣಗುತ್ತಿವೆ. ಗಿಡಗಳಿಗೆ ಅಗತ್ಯ ಪ್ರಮಾಣದ ತೇವಾಂಶ ದೊರೆಯದಿದ್ದರೆ ಕಾಳುಗಳ



ಬೆಳವಣಿಗೆ ಕುಂಠಿತವಾಗಿ ಇಳುವರಿ ಭಾರಿ ಪ್ರಮಾಣದಲ್ಲಿ ಕುಸಿಯುವ ಆತಂಕ ರೈತರನ್ನು ಕಾಡುತ್ತಿದೆ.

ಪ್ರತಿನಿತ್ಯ ಸುಮಾರು 34 ಡಿಗ್ರಿ ಸೆಲ್ಸಿಯಸ್‌ನಷ್ಟು ಉಷ್ಣತೆ ಕಂಡುಬರುತ್ತಿರುವುದರಿಂದ ಹೊಲದಲ್ಲಿನ ತೇವಾಂಶ ವೇಗವಾಗಿ ಆವಿಯಾಗುತ್ತಿದೆ. ಬೆಳಗ್ಗೆಯಿಂದಲೇ ಬಿಸಿಲಿನ ತಾಪ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಈಗಾಗಲೇ ನೀರಿನ ಕೊರತೆಯಿಂದ ಬಳಲುತ್ತಿರುವ ರಾಗಿ ಗಿಡಗಳು ಮತ್ತಷ್ಟು ಒಣಗುವ ಸ್ಥಿತಿಗೆ ತಲುಪಿವೆ.

ಟ್ಯಾಂಕರ್ ನೀರೇ ಆಸರೆ

ಮಳೆಯ ನಿರೀಕ್ಷೆಯಲ್ಲಿದ್ದ ರೈತರು ಕೊನೆಯ ಪ್ರಯತ್ನವಾಗಿ ತಮ್ಮ ಹೊಲಗಳಿಗೆ ಟ್ಯಾಂಕರ್ ಮೂಲಕ ನೀರು ಸಾಗಿಸಿ ಬೆಳೆ ಉಳಿಸಿಕೊಳ್ಳಲು ಹರಸಾಹಸ ಪಡುತ್ತಿದ್ದಾರೆ. ಒಂದು ಕಡೆ ಟ್ಯಾಂಕರ್ ನೀರಿನ ವೆಚ್ಚ, ಮತ್ತೊಂದೆಡೆ ಕೂಲಿ ಹಾಗೂ ಸಾಗಣೆ ವೆಚ್ಚ ರೈತರ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ತಂದಿದೆ.

ಮಳೆ ಆಶ್ರಿತ ಪ್ರದೇಶದಲ್ಲಿ ಬಿತ್ತನೆ ಮಾಡಿರುವ ರೈತರಿಗೆ ಪ್ರತಿಯೊಂದು ಎಕರೆಗೂ ಟ್ಯಾಂಕರ್ ಮೂಲಕ ನೀರು ಒದಗಿಸುವುದು ಸುಲಭದ ಕೆಲಸವಲ್ಲ. ಆದರೂ ತಿಂಗಳುಗಳ ಕಾಲ ಬೆವರು ಸುರಿಸಿ ಬೆಳೆಸಿದ ಬೆಳೆಯನ್ನು ಕಣ್ಣೆದುರೇ ಒಣಗಲು ಬಿಡಲಾಗದೆ, ಸಾಧ್ಯವಾದಷ್ಟು ನೀರು ಹಾಯಿಸಿ ಗಿಡಗಳನ್ನು ಉಳಿಸಿಕೊಳ್ಳಲು ರೈತರು ಪ್ರಯತ್ನಿಸುತ್ತಿದ್ದಾರೆ.

ಬಿತ್ತನೆಗೆ ಖರ್ಚು; ಇದೀಗ ನೀರಿಗೂ ಖರ್ಚು

ರಾಗಿ ಬಿತ್ತನೆಗೂ ಮುನ್ನ ಭೂಮಿ ಸಿದ್ಧಪಡಿಸುವುದು, ಬೀಜ, ಬಿತ್ತನೆ, ಗೊಬ್ಬರ, ಕಳೆ ತೆಗೆಯುವುದು ಸೇರಿದಂತೆ ವಿವಿಧ ಹಂತಗಳಲ್ಲಿ ರೈತರು ಹಣ ಖರ್ಚು ಮಾಡಿದ್ದಾರೆ. ಇದೀಗ ಮಳೆಯ ಕೊರತೆಯಿಂದ ಹೆಚ್ಚುವರಿಯಾಗಿ ಟ್ಯಾಂಕರ್ ನೀರಿಗೆ ಹಣ ವ್ಯಯಿಸುವ ಪರಿಸ್ಥಿತಿ ನಿರ್ಮಾಣವಾಗಿದೆ.

ಮಳೆ ಬಾರದಿದ್ದರೆ ಬೆಳೆ ಸಂಪೂರ್ಣ ಒಣಗಿ ಹೋಗುವ ಸಾಧ್ಯತೆ ಇದೆ. ಒಂದೆಡೆ ಬೆಳೆ ಉಳಿಸಿಕೊಳ್ಳಲು ನೀರು ಕೊಡಬೇಕಾದ ಅನಿವಾರ್ಯತೆ, ಮತ್ತೊಂದೆಡೆ ನೀರು ಕೊಟ್ಟರೂ ಮುಂದಿನ ದಿನಗಳಲ್ಲಿ ಮಳೆ ಬರುತ್ತದೆಯೇ ಎಂಬ ಖಚಿತತೆ ಇಲ್ಲದಿರುವುದು ರೈತರ ಆತಂಕವನ್ನು ಹೆಚ್ಚಿಸಿದೆ.

ಬರದ ನೆರಳಿನಲ್ಲಿ ರಾಗಿ ರೈತರ ಬದುಕು

ಜಗಳೂರು ತಾಲೂಕು ಮಳೆ ಆಶ್ರಿತ ಕೃಷಿ ಪ್ರದೇಶವಾಗಿದ್ದು, ಮಳೆಯ ಪ್ರಮಾಣ ಮತ್ತು ಸಮಯ ರೈತರ ಕೃಷಿ ಭವಿಷ್ಯವನ್ನು ನಿರ್ಧರಿಸುತ್ತದೆ. ಈ ಬಾರಿ ಬಿತ್ತನೆ ಬಳಿಕ ನಿರೀಕ್ಷಿತ ಪ್ರಮಾಣದಲ್ಲಿ



ಮಳೆ ಮುಂದುವರಿಯದಿರುವುದು ರಾಗಿ ಸೇರಿದಂತೆ ವಿವಿಧ ಬೆಳೆಗಳ ಮೇಲೆ ಪರಿಣಾಮ ಬೀರುತ್ತಿದೆ.

ರಾಗಿ ಬೆಳೆ ಕಾಳು ಕಟ್ಟುವ ಹಂತದಲ್ಲಿರುವುದರಿಂದ ಈ ಸಮಯದಲ್ಲಿ ಮಳೆ ಬಂದರೆ ಬೆಳೆಗಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂಬುದು ರೈತರ ನಿರೀಕ್ಷೆ. ಆದರೆ ದಿನದಿಂದ ದಿನಕ್ಕೆ ಬಿಸಿಲಿನ ತಾಪ ಹೆಚ್ಚಾಗುತ್ತಿದ್ದು, ಮಳೆ ಮುನ್ಸೂಚನೆಯ ನಿರೀಕ್ಷೆಯಲ್ಲಿಯೇ ರೈತರು ಹೊಲದತ್ತ ಮುಖ ಮಾಡುತ್ತಿದ್ದಾರೆ.

ರೈತರ ಆಗ್ರಹವೇನು?

ಮಳೆ ಕೊರತೆಯಿಂದ ಬೆಳೆ ಒಣಗುತ್ತಿರುವ ಹಿನ್ನೆಲೆಯಲ್ಲಿ ಕೃಷಿ ಇಲಾಖೆ ಅಧಿಕಾರಿಗಳು ಗ್ರಾಮೀಣ ಪ್ರದೇಶಗಳಿಗೆ ಭೇಟಿ ನೀಡಿ ಬೆಳೆ ಹಾನಿಯ ವಾಸ್ತವ ಸ್ಥಿತಿಯನ್ನು ಪರಿಶೀಲಿಸಬೇಕು. ರಾಗಿ ಸೇರಿದಂತೆ ಮಳೆ ಆಶ್ರಿತ ಬೆಳೆಗಳ ಪರಿಸ್ಥಿತಿಯ ಕುರಿತು ಸಮಗ್ರ ಸಮೀಕ್ಷೆ ನಡೆಸಿ, ಅಗತ್ಯವಿದ್ದಲ್ಲಿ ಬೆಳೆ ನಷ್ಟಕ್ಕೆ ಅನುಗುಣವಾಗಿ ಪರಿಹಾರ ಹಾಗೂ ಇತರ ಸರ್ಕಾರಿ ಸೌಲಭ್ಯಗಳನ್ನು ಒದಗಿಸಬೇಕು ಎಂಬುದು ರೈತರ ಆಗ್ರಹವಾಗಿದೆ.

ಅಲ್ಲದೆ, ಮುಂದಿನ ದಿನಗಳಲ್ಲಿ ಮಳೆಯ ಕೊರತೆ ಮುಂದುವರಿದರೆ ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗುವ ಸಾಧ್ಯತೆಯೂ ಇರುವುದರಿಂದ ಸರ್ಕಾರ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು ಎಂದು ರೈತರು ಒತ್ತಾಯಿಸುತ್ತಿದ್ದಾರೆ.

ಜಗಳೂರಿನ ಹೊಲಗಳಲ್ಲಿ ಕಂಡುಬರುತ್ತಿರುವ ಈ ದೃಶ್ಯ, ಮಳೆ ಆಶ್ರಿತ ರೈತರ ಬದುಕು ಪ್ರಕೃತಿಯ ಮೇಲೆ ಎಷ್ಟರಮಟ್ಟಿಗೆ ಅವಲಂಬಿತವಾಗಿದೆ ಎಂಬುದನ್ನು ಮತ್ತೊಮ್ಮೆ ಎತ್ತಿ ತೋರಿಸುತ್ತಿದೆ.

ಆಧಾರ್ ಅಪ್‌ಡೇಟ್‌ಗಾಗಿ ಕೇಂದ್ರಗಳ ಮುಂದೆ ಹೆಚ್ಚುತ್ತಿರುವ ಜನದಟ್ಟಣೆ; ಅಧಿಕಾರಿಗಳು ಗಮನಹರಿಸಲು ಆಗ್ರಹ



"ಮುಂಜಾನೆಯ ಮೆರಗು"

ಜಗಳೂರು ಸೆ. 20– ಪಡಿತರ ಚೀಟಿ–ದಾರರಿಗೆ ಇ–ಕೆವೈಸಿ ಮಾಡಿಸುವುದು ಕಡ್ಡಾಯವಾಗಿರುವ ಹಿನ್ನೆಲೆಯಲ್ಲಿ ಪಟ್ಟಣ ಸೇರಿದಂತೆ ತಾಲೂಕಿನ ವಿವಿಧ ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಚೀಟಿದಾರರು ಮುಂಜಾನೆಯಿಂದಲೇ ಸರತಿ ಸಾಲಿನಲ್ಲಿ ನಿಂತು ಇ–ಕೆವೈಸಿ ಮಾಡಿಸಿಕೊಳ್ಳುತ್ತಿರುವ ದೃಶ್ಯ ಸಾಮಾನ್ಯವಾಗಿದೆ.

ಸರ್ಕಾರದ ಪಡಿತರ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪಲು ಪಡಿತರ ಚೀಟಿಗೆ ಸಂಬಂಧಿಸಿದ ಸದಸ್ಯರ ಇ–ಕೆವೈಸಿ ಪೂರ್ಣಗೊಳಿಸುವಂತೆ ಸೂಚಿಸಲಾಗಿದ್ದು, ಈ ಹಿನ್ನೆಲೆಯಲ್ಲಿ ನ್ಯಾಯಬೆಲೆ ಅಂಗಡಿಗಳಲ್ಲಿ ಪ್ರತಿದಿನವೂ ಜನದಟ್ಟಣೆ ಕಂಡುಬರುತ್ತಿದೆ. ಸರ್ವರ್ ಸಮಸ್ಯೆ ಇಲ್ಲದೆ ಕಾರ್ಯನಿರ್ವಹಿಸಿದ ಸಂದರ್ಭದಲ್ಲಿ ಇ–ಕೆವೈಸಿ ಪ್ರಕ್ರಿಯೆ ಸಲೀಸಾಗಿ ನಡೆಯುತ್ತಿದೆ. ಆದರೆ ಸರ್ವರ್ ನಿಧಾನಗತಿ ಅಥವಾ ತಾಂತ್ರಿಕ ದೋಷ ಉಂಟಾದಾಗ ಪಡಿತರ ಚೀಟಿ–ದಾರರು ಗಂಟೆಗಟ್ಟಲೆ ಕಾಯುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ.

ವಿಶೇಷವಾಗಿ ಐದು ವರ್ಷ ಮೇಲ್ಪಟ್ಟ ಮಕ್ಕಳ ಆಧಾರ್ ಕಾರ್ಡ್‌ನಲ್ಲಿ ಅಗತ್ಯವಿರುವ ಅಪ್‌ಡೇಟ್ ಪೂರ್ಣಗೊಂಡಿರದಿದ್ದರೆ ಇ–ಕೆವೈಸಿ ಪ್ರಕ್ರಿಯೆಯಲ್ಲಿ ತೊಂದರೆ ಎದುರಾಗುತ್ತಿದೆ. ಆರು ವರ್ಷ ದಾಟಿದ ಮಕ್ಕಳಿಗೆ ಅಗತ್ಯ ಪ್ರಕ್ರಿಯೆ ಪೂರ್ಣಗೊಂಡಿದ್ದಲ್ಲಿ ಇ–ಕೆವೈಸಿ ಮಾಡಿಸಲು ಸಾಧ್ಯವಾಗುತ್ತಿದೆ ಎಂದು ಪಡಿತರ ಚೀಟಿದಾರರು ತಿಳಿಸಿದ್ದಾರೆ.

ಆಧಾರ್ ಕೇಂದ್ರಗಳಲ್ಲೂ ಜನದಟ್ಟಣೆ

ಇ–ಕೆವೈಸಿ ಮಾಡಿಸಲು ಆಧಾರ್ ಮಾಹಿತಿಯು ನವೀಕೃತವಾಗಿರಬೇಕಾದ ಹಿನ್ನೆಲೆಯಲ್ಲಿ ಆಧಾರ್ ಕಾರ್ಡ್ ಅಪ್‌ಡೇಟ್ ಮಾಡಿಸಿಕೊಳ್ಳಲು ಪಟ್ಟಣ ಹಾಗೂ ತಾಲೂಕಿನ ವಿವಿಧ ಆಧಾರ್ ಕೇಂದ್ರಗಳ ಮುಂದೆ ಜನರು ಸರತಿ ಸಾಲಿನಲ್ಲಿ ನಿಲ್ಲುವಂತಾಗಿದೆ. ದಿನದಿಂದ ದಿನಕ್ಕೆ ಜನದಟ್ಟಣೆ ಹೆಚ್ಚಾಗುತ್ತಿರುವುದರಿಂದ ವೃದ್ಧರು, ಮಹಿಳೆಯರು ಹಾಗೂ ಮಕ್ಕಳೊಂದಿಗೆ ಬರುವವರು ತೊಂದರೆ ಅನುಭವಿಸುತ್ತಿದ್ದಾರೆ.

ಇ–ಕೆವೈಸಿ ಪ್ರಕ್ರಿಯೆ ಮತ್ತು ಆಧಾರ್ ಅಪ್‌ಡೇಟ್ ಎರಡೂ ಪರಸ್ಪರ ಸಂಬಂಧ ಹೊಂದಿರುವುದರಿಂದ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಈ ಬಗ್ಗೆ ವಿಶೇಷ ಗಮನಹರಿಸಿ, ಅಗತ್ಯವಿರುವ ಕಡೆ ಹೆಚ್ಚುವರಿ ಸಿಬ್ಬಂದಿ ಹಾಗೂ ಸೂಕ್ತ ವ್ಯವಸ್ಥೆ ಕಲ್ಪಿಸಬೇಕು. ಸರ್ವರ್ ಸಮಸ್ಯೆಗಳನ್ನು ಪರಿಹರಿಸಿ, ಜನರು ಅನಗತ್ಯವಾಗಿ ಕಾಯುವ ಪರಿಸ್ಥಿತಿ ತಪ್ಪಿಸಬೇಕು ಎಂದು ಸಾಮಾಜಿಕ ಹೋರಾಟಗಾರ ರಾಘವೇಂದ್ರ ಒತ್ತಾಯಿಸಿದ್ದಾರೆ.

ಪಡಿತರ ಚೀಟಿದಾರರಿಗೆ ಇ–ಕೆವೈಸಿ ಮತ್ತು ಆಧಾರ್ ಅಪ್‌ಡೇಟ್ ಕುರಿತು ಸ್ಪಷ್ಟ ಮಾಹಿತಿ ನೀಡುವುದರ ಜತೆಗೆ, ಜನದಟ್ಟಣೆ ನಿಯಂತ್ರಿಸಲು ನ್ಯಾಯಬೆಲೆ ಅಂಗಡಿಗಳು ಹಾಗೂ ಆಧಾರ್ ಕೇಂದ್ರಗಳಲ್ಲಿ ಸೂಕ್ತ ವ್ಯವಸ್ಥೆ ಕಲ್ಪಿಸಬೇಕೆಂದು ಅವರು ಆಗ್ರಹಿಸಿದ್ದಾರೆ.



ಸ್ಪರ್ಧಾಕಾಂಕ್ಷಿಗಳ ಕನಸಿಗೆ ಗ್ರಂಥಾಲಯವೇ ದಾರಿದೀಪ

ಗ್ರಂಥಾಲಯದ ಸೌಲಭ್ಯ ಸದ್ಬಳಕೆ ಮಾಡಿಕೊಂಡು ಉದ್ಯೋಗ ಪಡೆಯಿರಿ: ಸಿ.ಲೋಕ್ಯಾನಾಯ್ಕ ಕರೆ

"ಮುಂಜಾನೆಯ ಮೆರಗು"

ಜಗಳೂರು ಸೆ. 20– ಸರ್ಕಾರಿ ಉದ್ಯೋಗದ ಕನಸು ಹೊತ್ತು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಉತ್ತಮ ಓದುವ ವಾತಾವರಣ ಹಾಗೂ ಅಗತ್ಯ ಪುಸ್ತಕಗಳನ್ನು ಒದಗಿಸುವ ನಿಟ್ಟಿನಲ್ಲಿ ಜಗಳೂರಿನಲ್ಲಿ ನಿರ್ಮಿಸಲಾಗಿರುವ ಗ್ರಂಥಾಲಯ ಇದೀಗ ಯುವಜನರ ಭವಿಷ್ಯ ರೂಪಿಸುವ ಪ್ರಮುಖ ಕೇಂದ್ರವಾಗಿ ಗಮನ ಸೆಳೆಯುತ್ತಿದೆ. ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಲೋಕನಾಯ್ಕ ಹೇಳಿದರು.

ಭಾನುವಾರ ಪಟ್ಟಣದ ಹಳೆ ಪಟ್ಟಣ ಪಂಚಾಯತಿ ಕಟ್ಟಡದ ಲ್ಲಿ ನಡೆಯುವ ಗ್ರಂಥಾಲಯ ಕ್ಕೆ ಭೇಟಿ ನೀಡಿ ಮಾತನಾಡಿ ಸುಮಾರು ವರ್ಷಗಳ ಕಾಲ ಪಟ್ಟಣ ಪಂಚಾಯತಿ ಕಾರ್ಯಾಲಯ ಇಲ್ಲೆ ಇತ್ತು ಇದು ಮೀಟಿಂಗ್ ಹಾಲ್ ಮಾಡಿಕೊಂಡಿದ್ದೇವು, ನೂತನ ಪಟ್ಟಣ ಪಂಚಾಯತಿ ಆದಮೇಲೆ ನಾವು ಅಲ್ಲಿಗೆ



ತೆರಳಿದೆವು.

ಶಾಸಕ ಬಿ. ದೇವೇಂದ್ರಪ್ಪ ಅವರ ಕಳಜಿಯಿಂದ ಇದು ಜ್ಞಾನ ಸೌಧ ವಾಗಿದೆ ನೂರಾರು ವಿದ್ಯಾರ್ಥಿಗಳಿಗೆ ನಂದ ದೀಪವಾಗಿದ್ದು ಸ್ಪರ್ಧಾತ್ಮಕ ಕಲಿಕಾ ಕೇಂದ್ರವಾಗಿದೆ ಎಂದರು

ಮುಖ್ಯ ಶಿಕ್ಷಕ ಸತೀಶ್ ಮಾತನಾಡಿ "ಸರ್ಕಾರಿ ಉದ್ಯೋಗ ಪಡೆಯಬೇಕೆಂಬ ಕನಸು ಹೊಂದಿರುವ ಪ್ರತಿಯೊಬ್ಬ ವಿದ್ಯಾರ್ಥಿಗೂ ಈ ಗ್ರಂಥಾಲಯ ಒಂದು ಉತ್ತಮ ಅವಕಾಶ. ಹೊರಗಡೆ ದುಬಾರಿ ತರಬೇತಿ ಮತ್ತು ಅಧ್ಯಯನ ಸಾಮಗ್ರಿಗಳಿಗಾಗಿ ಹೆಚ್ಚಿನ ಹಣ ಖರ್ಚು ಮಾಡುವ ಬದಲು ಲಭ್ಯವಿರುವ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು. ನಿಮ್ಮ ಪರಿಶ್ರಮವೇ ನಿಮ್ಮ ಭವಿಷ್ಯವನ್ನು ನಿರ್ಧರಿಸುತ್ತದೆ" ಎಂದು ಶುಭ ಹಾರೈಸಿದರು.

ಸರ್ಕಾರಿ ಕಟ್ಟಡಕ್ಕೆ ಹೊಸ ರೂಪ

ಇಲಾಖೆಯಿಂದ ಕಟ್ಟಡವನ್ನು ಪಡೆದು, ಅದನ್ನು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ಅನುಕೂಲವಾಗುವ ರೀತಿಯಲ್ಲಿ ಉತ್ತಮ ಗ್ರಂಥಾಲಯವಾಗಿ ರೂಪಿಸಿರುವುದು ಗಮನಾರ್ಹವಾಗಿದೆ. ಗ್ರಂಥಾಲಯದಲ್ಲಿ ವಿದ್ಯಾರ್ಥಿಗಳು ಕುಳಿತು ಓದಲು ಅನುಕೂಲವಾಗುವ ವ್ಯವಸ್ಥೆ ಹಾಗೂ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದೆ.

"ಸರ್ಕಾರಿ ಉದ್ಯೋಗ ಪಡೆಯಬೇಕೆಂಬ ಕನಸು ಹೊಂದಿರುವ ಪ್ರತಿಯೊಬ್ಬ ವಿದ್ಯಾರ್ಥಿಗೂ ಈ ಗ್ರಂಥಾಲಯ ಒಂದು ಉತ್ತಮ ಅವಕಾಶ. ಹೊರಗಡೆ ದುಬಾರಿ ತರಬೇತಿ ಮತ್ತು ಅಧ್ಯಯನ ಸಾಮಗ್ರಿಗಳಿಗಾಗಿ ಹೆಚ್ಚಿನ ಹಣ ಖರ್ಚು ಮಾಡುವ ಬದಲು ಲಭ್ಯವಿರುವ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು. ನಿಮ್ಮ ಪರಿಶ್ರಮವೇ ನಿಮ್ಮ ಭವಿಷ್ಯವನ್ನು ನಿರ್ಧರಿಸುತ್ತದೆ" ಎಂದು ಶುಭ ಹಾರೈಸಿದರು.

ಇಂದು ಜಗಳೂರು ಬಂದ್: ಹೋರಾಟಕ್ಕೆ ಸಜ್ಜಾದ ಬಿಜೆಪಿ

ಭದ್ರಾ ಮೇಲ್ದಂಡೆ ಕಾಮಗಾರಿ ತ್ವರಿತ ಪೂರ್ಣಗೊಳಿಸಲು ಒತ್ತಾಯ

"ಮುಂಜಾನೆಯ ಮೆರಗು"

ಜಗಳೂರು: ಮಳೆ ಕೊರತೆಯಿಂದ ಕೃಷಿ ಚಟುವಟಿಕೆಗಳು ಸಂಕಷ್ಟಕ್ಕೆ ಸಿಲುಕಿರುವ ನಡುವೆಯೇ ಜಗಳೂರು ತಾಲೂಕನ್ನು ಬರಪೀಡಿತ ತಾಲೂಕು ಎಂದು ಘೋಷಣೆ ಮಾಡದಿರುವುದು ಹಾಗೂ ಭದ್ರಾ ಮೇಲ್ದಂಡೆ ಯೋಜನೆಯ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸದಿರುವುದನ್ನು ಖಂಡಿಸಿ ಭಾರತೀಯ ಜನತಾ ಪಕ್ಷದ ಜಗಳೂರು ಮಂಡಲದ ವತಿಯಿಂದ ಸೆ.21ರಂದು ಸೋಮವಾರ ಜಗಳೂರು ಬಂದ್‌ಗೆ ಕರೆ ನೀಡಲಾಗಿದೆ.

ಬರದ ಸಂಕಷ್ಟದಲ್ಲಿರುವ ರೈತರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸಬೇಕು ಹಾಗೂ ಜಗಳೂರು ತಾಲೂಕನ್ನು ಬರಪೀಡಿತ ತಾಲೂಕುಗಳ ಪಟ್ಟಿಗೆ ಸೇರ್ಪಡೆಗೊಳಿಸಬೇಕು ಎಂಬ ಪ್ರಮುಖ ಬೇಡಿಕೆಯೊಂದಿಗೆ ಬಿಜೆಪಿ ಮುಖಂಡರು ಬಂದ್‌ಗೆ ಕರೆ ನೀಡಿದ್ದಾರೆ.

ಬೆಳಗ್ಗೆಯಿಂದಲೇ ಬಂದ್ ಕಾವು

ಸೋಮವಾರ ಬೆಳಗ್ಗೆ 5.30ರಿಂದ ಸಂಜೆ 6 ಗಂಟೆಯವರೆಗೆ ಜಗಳೂರು ಪಟ್ಟಣದಲ್ಲಿ ಬಂದ್ ನಡೆಯಲಿದೆ. ಬಂದ್ ಹಿನ್ನೆಲೆಯಲ್ಲಿ ಅಂಗಡಿ–ಮುಂಗಟ್ಟುಗಳು, ವಾಣಿಜ್ಯ ಸಂಸ್ಥೆಗಳು ಸೇರಿದಂತೆ ಬಹುತೇಕ ವ್ಯಾಪಾರ ಚಟುವಟಿಕೆಗಳು ಸ್ಥಗಿತಗೊಳ್ಳಲಿವೆ. ಬಸ್ ಸಂಚಾರವನ್ನೂ ಬಂದ್‌ನಲ್ಲಿ ಸ್ಥಗಿತಗೊಳಿಸಲು ಕರೆ ನೀಡಲಾಗಿದೆ.

ಆಸ್ಪತ್ರೆಗಳು, ಔಷಧಿ ಅಂಗಡಿಗಳು ಹಾಗೂ ಹಾಲಿನ ಅಂಗಡಿಗಳಿಗೆ ಮಾತ್ರ ವಿನಾಯಿತಿ ನೀಡಲಾಗಿದೆ. ಶಾಲಾ–ಕಾಲೇಜುಗಳು, ಸರ್ಕಾರಿ ಕಚೇರಿಗಳು ಹಾಗೂ ಇತರ ಅಂಗಡಿ–ಮುಂಗಟ್ಟುಗಳು ಬಂದ್‌ಗೆ ಸಹಕರಿಸುವಂತೆ ಮನವಿ ಮಾಡಲಾಗಿದೆ.

ರೈತರ ಸಂಕಷ್ಟಕ್ಕೆ ಧ್ವನಿಯಾಗಲಿ ಬಂದ್

ಮಳೆ ಕೊರತೆಯಿಂದಾಗಿ ತಾಲೂಕಿನ ಹಲವು ಭಾಗಗಳಲ್ಲಿ ಬಿತ್ತನೆ ಮಾಡಿದ ಬೆಳೆಗಳು ಮಳೆಗಾಗಿ ಕಾಯುವಂತಾಗಿದೆ. ಕೃಷಿಯನ್ನೇ ಅವಲಂಬಿಸಿರುವ ರೈತರು ಬೆಳೆ ಉಳಿಸಿಕೊಳ್ಳಲು ಪರದಾಡುತ್ತಿರುವ ಸಂದರ್ಭದಲ್ಲಿ ಜಗಳೂರನ್ನು ಬರಪೀಡಿತ ತಾಲೂಕು ಎಂದು ಘೋಷಿಸದಿರುವುದು ರೈತರಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ ಎಂದು ಬಿಜೆಪಿ ಮುಖಂಡರು ಹೇಳಿದ್ದಾರೆ.

ಬರಪೀಡಿತ ತಾಲೂಕು ಘೋಷಣೆಯಾದರೆ ರೈತರಿಗೆ ಬೆಳೆ ನಷ್ಟ ಪರಿಹಾರ, ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಸೇರಿದಂತೆ ಸರ್ಕಾರದ ವಿವಿಧ ಬರ ಪರಿಹಾರ ಕ್ರಮಗಳು ದೊರೆಯಲು ಅನುಕೂಲವಾಗಲಿದೆ. ಹೀಗಾಗಿ ಸರ್ಕಾರ ಕೂಡಲೇ ಸೂಕ್ತ ಕ್ರಮ ಕೈಗೊಳ್ಳಬೇಕು ಎಂಬುದು ಪ್ರತಿಭಟನಾಕಾರರ ಆಗ್ರಹವಾಗಿದೆ.

ಭದ್ರಾ ಮೇಲ್ದಂಡೆ ಯೋಜನೆಗೆ ವೇಗ ನೀಡಲು ಆಗ್ರಹ

ಜಗಳೂರು ತಾಲೂಕಿನ ನೀರಾವರಿ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ನಿರೀಕ್ಷೆ ಮೂಡಿಸಿರುವ ಭದ್ರಾ ಮೇಲ್ದಂಡೆ ಯೋಜನೆಯ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರ

ಸಾರ್ವಜನಿಕ ಕುಂದುಕೊರತೆಗಳಮನವಿಗಳನ್ನು ಡಿಜಿಟಲೀಕರಣಗೊಳಿಸಿ ಸಮಸ್ಯೆ ಪರಿಹರಿಸಿ: ಶಾಸಕ ಸಮರ್ಥ್ ಶಾಮನೂರು

"ಮುಂಜಾನೆಯ ಮೆರಗು"

ದಾವಣಗೆರೆ ಸೆ.20– ಸಾರ್ವಜನಿಕರದೂರು ಹಾಗೂ ಮನವಿಗಳನ್ನು ಕೇವಲ ಕಾಗದಪತ್ರಗಳಿಗೆ ಸೀಮಿತಗೊಳಿಸದೆ, ಸಂಪೂರ್ಣವಾಗಿ ಡಿಜಿಟಲೀಕರಣಗೊಳಿಸಿ ಪರಿಹಾರ ಕಂಡುಕೊಳ್ಳುವಂತೆ ದಾವಣಗೆರೆದಕ್ಷಿಣ ವಿಧಾನಸಭಾಕ್ಷೇತ್ರದ ಶಾಸಕ ಸಮರ್ಥ್ ಶಾಮನೂರುಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅವರು ಶನಿವಾರದಾವಣಗೆರೆತಾಲೂಕಿನಜರಿಕಟ್ಟೆಗ್ರಾಮದಲ್ಲಿ 'ಪ್ರಜಾ ಸೇವೆ' ಆಂದೋಲನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರಜಾ ಸೇವೆಯ ಪ್ರಮುಖಉದ್ದೇಶವೇ ಸಾರ್ವಜನಿಕರ ದೂರುಗಳಿಗೆ ಸ್ಪಂದಿಸುವುದು. 'ಪ್ರಜಾ ಸ್ಪಂದನ' ಕಾರ್ಯಕ್ರಮದ ಮೂಲಕ ಜನರ ಕಷ್ಟಗಳಿಗೆ ಸ್ಪಂದಿಸಿ, ಅವರ ಸಮಸ್ಯೆಗಳಿಗೆ ಸೂಕ್ತ ಪರಿಹಾರಒದಗಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದರು.

ಕಾಗದದಲ್ಲಿ ನೀಡುವ ಮನವಿಗಳು ಕಳೆದುಹೋಗುವ ಸಾಧ್ಯತೆ ಇರುವುದರಿಂದ, ಪ್ರತಿಯೊಂದು ಅರ್ಜಿಯನ್ನು ತಕ್ಷಣವೇ ಆನ್‌ಲೈನ್‌ನಲ್ಲಿ ದಾಖಲಿಸಿ ಅರ್ಜಿದಾರರಿಗೆ ರಸೀದಿ ನೀಡಬೇಕು. ಇದರಿಂದ ಪ್ರತಿಯೊಂದುದೂರಿನ ಪ್ರಗತಿಯನ್ನು ಲ್ಯಾಪ್‌ಟಾಪ್ ಮೂಲಕ ಸುಲಭವಾಗಿ



ಪರಿಶೀಲಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ರಸ್ತೆಗುಂಡಿ ಮುಚ್ಚುವುದು, ಜಂಗಲ್‌ಕ್ಲೀನಿಂಗ್ ಮುಂತಾದ ಸಣ್ಣಪುಟ್ಟ ಮೂಲಸೌಕರ್ಯ ಕಾಮಗಾರಿಗಳಿಗೆ ಅನುದಾನ ಇಲ್ಲ' ಎಂಬ ನೆಪ ಹೇಳದೆ ತಕ್ಷಣವೇ ಕ್ರಮ ಕೈಗೊಳ್ಳಬೇಕು. ಜೆಸಿಬಿ ಮತ್ತುಅಗತ್ಯ ಕೆಲಸಗಾರರನ್ನು ಬಳಸಿಕೊಂಡು ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೆ ನಿರ್ದೇಶಿಸಿದರು.

ಸ್ಥಳೀಯ ಮಹಿಳೆಯರು ಹಾಗೂ ಉದ್ಯಮಿಗಳು ತಯಾರಿಸಿದ ಉಪ್ಪಿನಕಾಯಿ, ರೊಟ್ಟಿ, ಬಟ್ಟೆ ಹಾಗೂ ಗಾಣದ ಎಣ್ಣೆಯಂತಹ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ಮಳಿಗೆಗಳಿಗೆ ಭೇಟಿ ನೀಡಿ ಪ್ರೋತ್ಸಾಹಿಸಿದರು.

ಪ್ರಜಾ ಸೇವೆ ಕಾರ್ಯಕ್ರಮವು ದಾವಣಗೆರೆ ದಕ್ಷಿಣ ವ್ಯಾಪ್ತಿಯ ಎಂಟು ಗ್ರಾಮ ಪಂಚಾಯಿತಿಗಳಲ್ಲಿ ಹಂತ–ಹಂತವಾಗಿ ಪ್ರತಿ ಶನಿವಾರ ಮುಂದುವರಿಯಲಿದ್ದು, ಸಾರ್ವಜನಿಕರುತಮ್ಮ ಮನೆ ಬಾಗಿಲಿಗೆ ಬಂದಿರುವ ಈ ಆಂದೋಲನದ ಸದುಪಯೋಗ ಪಡೆದುಕೊಳ್ಳಬೇಕೆಂದು ಮನವಿ ಮಾಡಿದರು.

ಜಿಲ್ಲಾಧಿಕಾರಿ ಗಂಗಾಧರ ಸ್ವಾಮಿ ಜಿ ಎಂ ಅವರು ಮಾತನಾಡಿ ಜನರ ಕಂದುಕೊರತೆ ಆಲಿಸಲು 'ಪ್ರಜಾಸೇವೆ' ಆಂದೋಲನ ಕಾರ್ಯಕ್ರಮ ಆಯೋಜಿಸಲಾಗಿದೆ.

ನಗರ ಪ್ರದೇಶಗಳಲ್ಲಿ ಈಗಾಗಲೇ ಹಲವು ಸಮಸ್ಯೆಗಳನ್ನು ಪರಿಶೀಲಿಸಲಾಗಿದ್ದು, ಶಾಸಕರ ನಿರ್ದೇಶನದಂತೆ ಈ ಪ್ರಜಾಸೇವೆ ಆಂದೋಲನವನ್ನು ಹೋಬಳಿ ಹಾಗೂ ಗ್ರಾಮ ಮಟ್ಟಕ್ಕೂ ವಿಸ್ತರಿಸಲಾಗುತ್ತಿದೆಎಂದು ತಿಳಿಸಿದರು.

ಸರ್ಕಾರದ ಈ ಯೋಜನೆಯಡಿ ಸಾರ್ವಜನಿಕರ ಕುಂದುಕೊರತೆಗಳನ್ನು ಲಿಖಿತರೂಪದಲ್ಲಿ ಸ್ವೀಕರಿಸಿ, ಅವುಗಳಿಗೆ ನಿಯಮಾನುಸಾರ ಸೂಕ್ತ ಪರಿಹಾರಒದಗಿಸುವ ಕೆಲಸ ಮಾಡಲಾಗುತ್ತಿದೆ .

ಸಾರ್ವಜನಿಕರು ನಿಗದಿತಅರ್ಜಿ ನಮೂನೆಯಲ್ಲಿತಮ್ಮ ಸಂಪೂರ್ಣ ವಿವರ, ಮೊಬೈಲ್ ಸಂಖ್ಯೆ, ಇ–ಮೇಲ್ ಮತ್ತು ವಿಳಾಸವನ್ನು ಸ್ಪಷ್ಟವಾಗಿ ನಮೂದಿಸಿ ಸಲ್ಲಿಸಬೇಕು ಹಾಗೂ ಸ್ವೀಕೃತಿ ರಸೀದಿಯನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಪ್ರತೀ ಶನಿವಾರ ನಡೆಯುವ ಈ ಕಾರ್ಯಕ್ರಮದಲ್ಲಿ ಸ್ವೀಕೃತವಾಗುವ ಅರ್ಜಿಗಳನ್ನು ಪ್ರತಿ ಬುಧವಾರತಾಲೂಕು, ವಿಭಾಗೀಯ ಹಾಗೂ ಜಿಲ್ಲಾಧಿಕಾರಿಗಳ ಮಟ್ಟದಲ್ಲಿ ಹಂತ–ಹಂತವಾಗಿ ಪರಿಶೀಲಿಸಿ ವಿಲೇವಾರಿ ಮಾಡಲಾಗುತ್ತದೆ.

ಸ್ವೀಕರಿಸಿದ ಪ್ರತಿಯೊಂದು ಅರ್ಜಿಯನ್ನು ಆನ್‌ಲೈನ್‌ನಲ್ಲಿ ದಾಖಲಿಸಲಾಗುತ್ತಿದ್ದು,



ಕೈಗೊಂಡಕ್ರಮದ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲಾಗುತ್ತದೆ. ಅರ್ಜಿಗಳನ್ನು ಸಲ್ಲಿಸಲು ಸಾರ್ವಜನಿಕರು ನೂಕುನುಗ್ಗಲು ಮಾಡದೆ ತಾಳ್ಮೆಯಿಂದ ಸಹಕರಿಸಬೇಕು. ತಾಲೂಕು ಕಚೇರಿಯಲ್ಲೂ ಪ್ರತ್ಯೇಕ ಕೌಂಟರ್ ತೆರೆಯಲಾಗಿದ್ದು, ಅಲ್ಲಿಯೂಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆಎಂದು ತಿಳಿಸಿದರು.

ಈಗಾಗಲೇ ಬಂದಿರುವ ಅರ್ಜಿಗಳಲ್ಲಿ ಬಹುತೇಕ ಅರ್ಜಿಗಳು ನಿವೇಶನ, ಹಕ್ಕುಪತ್ರ, ಪೌತಿಖಾತೆ ಹಾಗೂ ಕಂದಾಯ ಇಲಾಖೆಗೆ ಸಂಬಂಧಿಸಿದ ಸಮಸ್ಯೆಗಳಾಗಿದ್ದು, ಅವುಗಳನ್ನು ಆದ್ಯತೆಯ ಮೇರೆಗೆ ಬಗೆಹರಿಸಲುಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಸಾಹಿತ್ಯಎಂ. ಅಲದಕಟ್ಟಿ, ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್, ಉಪ ಕಾರ್ಯದರ್ಶಿ ಮಮತಾ ಹೊಸಗೌಡರ್, ಡಿಡಿಎಲ್‌ಆರ್ ಭಾಗ್ಯ, ಕೃಷಿ ಜಂಟಿ ನಿರ್ದೇಶಕ ಜಿಯಾವುಲ್ಲಾ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಮಧುಸೂಧನ್, ಇಓ ರಾಂಭೋವಿ, ತಹಶೀಲ್ದಾರ್ ರಾಜೇಶ್, ಜಿಲ್ಲಾ ಮಟ್ಟದತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಮಲೆನಾಡು ಜನರ ಹಿತರಕ್ಷಣೆಗೆ ಸರ್ಕಾರ ಬದ್ಧ : ಸಿಎಂ ಡಿಕೆಶಿ ಭರವಸೆ

"ಮುಂಜಾನೆಯ ಮೆರಗು"

ಬೆಂಗಳೂರು, ಸೆ.20– ಕಸ್ತೂರಿ ರಂಗನ್ ವರದಿ ಹಿನ್ನೆಲೆಯಲ್ಲಿ ಜನರ ಹಿತರಕ್ಷಣೆಗೆ ಸರ್ಕಾರ ಬದ್ಧವಾಗಿದ್ದು, ಅದೇ ಸಮಯಕ್ಕೆ ಪರಿಸರ ರಕ್ಷಣೆಗೂ ಒತ್ತು ನೀಡುವುದಾಗಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲ್ಲೂಕಿನ ಸರ್ಕಾರಿ ಪದವಿಪೂರ್ವ ಕಾಲೇಜುಮೈದಾನದಲ್ಲಿ ನಡೆದ ನೇರ ಸಂವಾದ ಸಭೆಯಲ್ಲಿ ಮಾತನಾಡಿದ ಅವರು, ಜನರ ಅಭಿಪ್ರಾಯ ಸಂಗ್ರಹಿಸಲು ತಾವು ಪಶ್ಚಿಮ ಘಟ್ಟದ ಜಿಲ್ಲೆಗಳಲ್ಲಿ ಸಾರ್ವಜನಿಕ ಸಭೆಗಳನ್ನು ನಡೆಸುತ್ತಿರುವುದಾಗಿ ತಿಳಿಸಿದರು.

ಈಗಾಗಲೇ ನಿನ್ನೆ ಹೆಬ್ರಿಯಲ್ಲಿ ಸಭೆ ನಡೆಸಲಾಗಿದೆ. ಇಂದು ಮತ್ತು ನಾಳೆ ಮತ್ತಷ್ಟು ಸಭೆಗಳನ್ನು ನಡೆಸುತ್ತೇನೆ. ಅಧಿಕಾರಿಗಳು, ಜನ ಪ್ರತಿನಿಧಿಗಳ ಅಭಿಪ್ರಾಯವನ್ನು ಸಂಗ್ರಹಿಸುವುದಾಗಿ ಹೇಳಿದರು.ಮಲೆನಾಡು ಭಾಗದ ಜನ ಆತಂಕಕ್ಕೊಳಾಗುವ ಅಗತ್ಯ ಇಲ್ಲ. ಸರ್ಕಾರ ನಿಮ ಬೆಂಬಲಕ್ಕಿದೆ. ಸೋಮವಾರದಿಂದ ನಡೆಯುವ ಅಧಿವೇಶನದಲ್ಲಿ ಈ ಕುರಿತು ಚರ್ಚೆ ನಡೆಸಿ ನಿರ್ಧಾರ ತೆಗೆದುಕೊಳ್ಳುವುದಾಗಿ ಹೇಳಿದರು.ಶರಾವತಿ ಹಿನ್ನೀರಿನ ಯೋಜನೆಯಲ್ಲಿ ಮುಳುಗಡೆಯಾಗಿರುವ



ಭೂಮಿಯ ಸಂತ್ರಸ್ತರ ಪುನರ್ ವಸತಿಗೂ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಸಭೆಯಲ್ಲಿ ಕಸ್ತೂರಿ ರಂಗನ್ ವರದಿ ವಿಚಾರವಾಗಿ ಪಕ್ಷಾತೀತವಾಗಿ ವಿರೋಧ ವ್ಯಕ್ತವಾಯಿತು. ಸಂಸದ ಬಿ.ವೈ. ರಾಘವೇಂದ್ರ, ರಾಜ್ಯ ಸರ್ಕಾರ ಕೇಂದ್ರದತ್ತ ಬೆರಳು ಮಾಡಿ ಹೊಣೆಗಾರಿಕೆಯಿಂದ ನುಣಚಿಕೊಳ್ಳುವ ಪ್ರಯತ್ನ ಮಾಡಬಾರದು. ಈ ಹಿಂದೆ 1999ರಲ್ಲಿ ಆಗಿನ ಸರ್ಕಾರಗಳು ಗಾಡ್ಗಿಲ್ ಮತ್ತು ಕಸ್ತೂರಿ ರಂಗನ್ ಸಮಿತಿಗಳನ್ನು ರಚಿಸದೇ ಇದ್ದಿದ್ದರೆ ಈಗಿನ ಆತಂಕ ಪರಿಸ್ಥಿತಿ ನಿರ್ಮಾಣವಾಗುತ್ತಿರಲಿಲ್ಲ ಎಂದರು.

ಶಾಸಕ ಅರಗ ಜ್ಞಾನೇಂದ್ರ ಮಾತನಾಡಿ, ವರದಿ ಅನುಷ್ಠಾನಕ್ಕೆ ಆಕ್ಷೇಪಣೆ ಸಲ್ಲಿಸಲು ಕೇಂದ್ರ ಸರ್ಕಾರ ನಿಗದಿ ಪಡಿಸುವ ಗಡುವನ್ನು ಒಂದು ವರ್ಷದ ಅವಧಿಗೆ ವಿಸ್ತರಣೆ ಮಾಡಲು ಮನವಿ ಮಾಡಬೇಕು. ಅಷ್ಟರೊಳಗೆ ಸಮೀಕ್ಷೆ ನಡೆಸಿ ವಾಸ್ತವ ಅಂಶವನ್ನು ಸಿದ್ಧಗೊಳಿಸಬೇಕು ಎಂದರು. ಗುಟ್ಕಾ ನಿಷೇಧವನ್ನು ಹಿಂಪಡೆಯಬೇಕು. ಇದರಿಂದ ಅಡಿಕೆ ಬೆಳೆಗಾರರಿಗೆ ಸಮಸ್ಯೆ ಎದುರಾಗುತ್ತದೆ ಎಂದರು.

ಶಾಸಕ ಚೆನ್ನಬಸಪ್ಪ ಮಾತನಾಡಿ, ಕಸ್ತೂರಿ ರಂಗನ್ ವರದಿ ಜಾರಿಯಾಗಬಾರದು. ಮೊದಲ ಕರಡು ಅಧಿಸೂಚನೆ 2014ರ ಮಾರ್ಚ್‌ನಲ್ಲಿ ಹೊರಡಿಸಲಾಗಿದೆ. ಅನಂತರ 7 ಅಧಿಸೂಚನೆಗಳು ಪ್ರಕಟವಾಗಿವೆ. ಆದರೆ ವರದಿ ಅನುಷ್ಠಾನಕ್ಕೆ ಬಂದಿಲ್ಲ ಎಂದರು. ಜಿಲ್ಲೆಯ ವಿವಿಧ ಹೋರಾಟಗಾರರು, ರೈತ ಮುಖಂಡರು, ಸ್ಥಳೀಯ ಜನ ಪ್ರತಿನಿಧಿಗಳು ಮಾತನಾಡಿ, ವರದಿಯಿಂದ ಜನ ಸಾಮಾನ್ಯರಿಗಾಗುತ್ತಿರುವ ತೊಂದರೆಗಳನ್ನು ವಿವರಿಸಿ ಆಕ್ರೋಶ ವ್ಯಕ್ತಪಡಿಸಿದರು.

ಅರಣ್ಯ ಉಳಿಯಬೇಕು. ಹಾಗೆಂದು ಜನರ ಮಾರಣಹೋಮ ಮಾಡಿ ವರದಿ ಅನುಷ್ಠಾನ ಮಾಡುವುದು ಸರಿಯಲ್ಲ ಎಂದರು. ವರದಿಯ ಬಗ್ಗೆ ಜನಾಭಿಪ್ರಾಯ ಸಂಗ್ರಹಿಸಲು ಮುಖ್ಯಮಂತ್ರಿಯವರೇ ಆಗಮಿಸಿರುವುದಕ್ಕೆ ಭಾರಿ ಮೆಚ್ಚುಗೆ ವ್ಯಕ್ತವಾಯಿತು. ಅದೇ ವೇಳೆ ವರದಿ ಬಗ್ಗೆ ಚರ್ಚಿಸಲು ವಿಶೇಷ ಅಧಿವೇಶನ ಕರೆದಿರುವುದಕ್ಕೂ ಶ್ಲಾಘನೆಗಳು ಕೇಳಿ ಬಂದವು.ಜಿಲ್ಲಾ ಉಸ್ತುವಾರಿ ಸಚಿವ ಮಧುಬಂಗಾರಪ್ಪ, ಅರಣ್ಯ ಸಚಿವ ರಾಮಲಿಂಗಾರೆಡ್ಡಿ, ಶಾಸಕರಾದ ಬೇಳೂರು ಗೋಪಾಲಕೃಷ್ಣ, ಮಾಜಿ ಸಚಿವ ಕಿಮನೆ ರತ್ನಾಕರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ದೀಕ್ಷಾ ಭೂಮಿಯಾತ್ರೆ: ಆನ್‌ಲೈನ್ ಅರ್ಜಿ ಸಲ್ಲಿಕೆಗೆ ಆಹ್ವಾನ

"ಮುಂಜಾನೆಯ ಮೆರಗು"

ದಾವಣಗೆರೆ ಸೆ.20– 2026–27ನೇ ಸಾಲಿನಲ್ಲಿ ಮಹಾರಾಷ್ಟ್ರದ ನಾಗಪುರದಲ್ಲಿರುವ ದೀಕ್ಷಾಭೂಮಿಗೆ ಭೇಟಿ ನೀಡಲು ಇಚ್ಛಿಸುವ ಡಾ. ಬಿ.ಆರ್. ಅಂಬೇಡ್ಕರ್‌ರವರ ಅನುಯಾಯಿಗಳಿಂದ ಸಮಾಜ ಕಲ್ಯಾಣ ಇಲಾಖೆಯು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

ಮಹಾರಾಷ್ಟ್ರದ ನಾಗಪುರ ದೀಕ್ಷಾ ಭೂಮಿಯಾತ್ರೆಗಾಗಿ ರಾಜ್ಯದ ವಿವಿಧ ಜಿಲ್ಲೆಗಳಿಂದ ದಿನಾಂಕ: 19–10–2026 ರಿಂದ 22–10–2026 ರವರೆಗೆ ಪ್ರಯಾಣಿಸಲು ಹಾಗೂ ಹಿಂತಿರುಗಿ ಬರಲು ಬಸ್ ಮತ್ತು ರೈಲಿನ ಸೌಲಭ್ಯವನ್ನು ಕಲ್ಪಿಸಲಾಗಿದೆ.

ಆಸಕ್ತ ಯಾತ್ರಾರ್ಥಿಗಳು ದಿನಾಂಕ: 19–09–2026 ರಿಂದ 09–10–2026 ರವರೆಗೆ ಸಮಾಜ ಕಲ್ಯಾಣ ಇಲಾಖೆಯ ಅಧಿಕೃತ ವೆಬ್‌ಸೈಟ್ https://swd.karnataka.gov.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

ಪೊಲೀಸ್ ಠಾಣೆ ಎದುರಲ್ಲೇ ಕಾರಿನಲ್ಲೇ ರಿಯಲ್ ಎಸ್ಟೇಟ್ ಉದ್ಯಮಿ ಸಾವು

"ಮುಂಜಾನೆಯ ಮೆರಗು"

ಬೆಂಗಳೂರು, ಸೆ.20– ನಗರದ ಕೋರಮಂಗಲ ಪೊಲೀಸ್ ಠಾಣೆ ಮುಂಭಾಗ ಫಾಸ್ಟ್‌ಫುಡ್ ಹೋಟೆಲ್ ಬಳಿ ಐಷಾರಾಮಿ ಕಾರಿನಲ್ಲೇ ರಿಯಲ್ ಎಸ್ಟೇಟ್ ಉದ್ಯಮಿಯೊಬ್ಬರು ಮೃತಪಟ್ಟಿದ್ದಾರೆ.

ಸಾವನ್ನಪ್ಪಿರುವವರನ್ನು ಕೊಡಗು ಜಿಲ್ಲೆಯ ಅಕ್ಬರ್ (46) ಎಂದು ಗುರುತಿಸಲಾಗಿದೆ. ಇವರು ರಿಯಲ್ ಎಸ್ಟೇಟ್ ವ್ಯವಹಾರ ನಡೆಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಇಂದು ಮುಂಜಾನೆ ಆಡಿ ಕಾರನ್ನು ಸ್ವತಃ ಚಾಲನೆ ಮಾಡಿಕೊಂಡು ನಗರಕ್ಕೆ ಬಂದು ಕೋರಮಂಗಲ ಪೊಲೀಸ್ ಠಾಣೆ ಮುಂಭಾಗ ಸಾಗರ್ ಫಾಸ್ಟ್‌ಫುಡ್ ಹೋಟೆಲ್ ಬಳಿ ನಿಲ್ಲಿಸಿದ್ದಾರೆ. ಆಗ ಸೀಟಿನಲ್ಲಿ ಕುಳಿತ್ತಿದ್ದಾಗಲೇ ಅವರು ಅಸುನೀಗಿದ್ದಾರೆ.



ರಸ್ತೆಯಲ್ಲಿ ಹೋಗುತ್ತಿದ್ದ ಸಾರ್ವಜನಿಕರು ನೋಡಿ ಪೊಲೀಸರಿಗೆ ತಿಳಿಸಿದ್ದಾರೆ. ಸ್ಥಳಕ್ಕೆ ದಾವಿಸಿ ಬಂದ ಪೊಲೀಸರು ಪರಿಶೀಲಿಸಿ, ಪ್ರಕರಣ ದಾಖಲಿಸಿಕೊಂಡು ಶವವನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ಕಳುಹಿಸಿದ್ದಾರೆ.

ಮೇಲ್ನೋಟಕ್ಕೆ ಹೃದಯಾಘಾತದಿಂದ ಅಕ್ಬರ್ ಮೃತಪಟ್ಟಿರಬಹುದೆಂದು ಪೊಲೀಸರು ಶಂಕಿಸಿದ್ದಾರೆ. ಮರಣೋತ್ತರ ವರದಿ ಬಂದ ನಂತರ ಇವರ ಸಾವಿಗೆ ನಿಖರ ಕಾರಣ ತಿಳಿದು ಬರಲಿದೆ.

ಸೆಮಿಕಾನ್ ಇಂಡಿಯಾ 2026: 2ನೇ ದಿನ 10 ಕಂಪನಿಗಳ ಜತೆ ಎಂ.ಬಿ.ಪಾಟೀಲ ಮಾತುಕತೆ

"ಮುಂಜಾನೆಯ ಮೆರಗು"

ಬೆಂಗಳೂರು: ದೆಹಲಿಯಲ್ಲಿ ನಡೆದ ಎರಡು ದಿನಗಳ ಸೆಮಿಕಾನ್ ಇಂಡಿಯಾ–2026 ಸಮಾವೇಶದಲ್ಲಿ ಉನ್ನತ ಮಟ್ಟದ ನಿಯೋಗದೊಂದಿಗೆ ಪಾಲ್ಗೊಂಡಿದ್ದ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಅವರು ಶುಕ್ರವಾರದಂದು ನೆದರ್ಲೆಂಡ್ಸ್ ಮೂಲದ ಎಎಸ್‌ಎಂಎಲ್ ಸೆಮಿಕಂಡಕ್ಟರ್ಸ್ ಮತ್ತು ನೆಕ್ಸೀರಿಯಾ, ಅಮೆರಿಕದ 3ಡಿ ಗ್ಲಾಸ್ ಸೊಲ್ಯೂಷನ್ಸ್, ಎಟಿ&ಎಸ್, ಜಪಾನಿನ ಫ್ಯೂಜಿ ಫಿಲಂ ಮತ್ತು ಲ್ಯಾಮ್ ರೀಸರ್ಚ್ ಸೇರಿದಂತೆ ಹಲವು ಕಂಪನಿಗಳೊಂದಿಗೆ ರಾಜ್ಯದಲ್ಲಿ ಹೂಡಿಕೆ ಮತ್ತು ತಯಾರಿಕಾ ಸ್ಥಾವರ ಆರಂಭಿಸುವಂತೆ ಮಾತುಕತೆ ನಡೆಸಿದ್ದಾರೆ.

ಈ ಬಗ್ಗೆ ಮಾಧ್ಯಮ ಪ್ರಕಟಣೆ ನೀಡಿರುವ ಅವರು, ಉಳಿದಂತೆ ಅಪ್ಲೈಡ್ ಮೆಟೀರಿಯಲ್ಸ್, ಎಂಎಸ್‌ಎಂಎಲ್, ಗೋದಾವರಿ ಕಮಾಡಿಟೀಸ್, ಟೋಕಿಯೋ ಎಲೆಕ್ಟ್ರಾನ್, ಸಿರ್ಮಾ ಎಸ್.ಜಿ.ಎಸ್ ಕಂಪನಿಗಳೊಂದಿಗೆ ಮಾತುಕತೆ ನಡೆಸಿರುವುದಾಗಿ ತಿಳಿಸಿದ್ದಾರೆ.

ಲ್ಯಾಮ್ ರೀಸರ್ಚ್ ಕಂಪನಿಯು ರಾಜ್ಯದಲ್ಲಿ ತನ್ನ ಮಹತ್ವಾಕಾಂಕ್ಷಿ ಯೋಜನೆಗೆ 10 ಸಾವಿರ ಕೋಟಿ ರೂ. ಹೂಡಿಕೆ ಮಾಡುವುದಾಗಿ ಈಗಾಗಲೇ ಘೋಷಿಸಿದೆ. ಸೆಮಿಕಂಡಕ್ಟರ್ ಕ್ಷೇತ್ರದ ಈ ಯೋಜನೆಯನ್ನು ಆದಷ್ಟು ತ್ವರಿತವಾಗಿ ಅನುಷ್ಠಾನಕ್ಕೆ ತರಲು ಅಗತ್ಯವಿರುವ ಕ್ರಮಗಳೇನೆನು ಎನ್ನುವುದನ್ನು ಚರ್ಚಿಸಲಾಗಿದೆ. ಜತೆಗೆ ಅಪ್ಲೈಡ್ ಮೆಟೀರಿಯಲ್ಸ್ ಕಂಪನಿ ಮಾಡುತ್ತಿರುವ ಹೂಡಿಕೆಯಿಂದ ರಾಜ್ಯದಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ಹಾಗೂ ತಯಾರಿಕೆ ಎರಡೂ ಸಾಕಾರಗೊಳ್ಳಲಿದೆ ಎಂದು ಅವರು ಹೇಳಿದ್ದಾರೆ.

ಎಟಿ&ಎಸ್ ಕಂಪನಿ ಕಳೆದ 25 ವರ್ಷಗಳಿಂದಲೂ ನಂಜನಗೂಡಿನಲ್ಲಿ ಅತ್ಯುತ್ತಮ ಗುಣಮಟ್ಟದ ಪ್ರಿಂಟೆಡ್ ಸರ್ಕ್ಯೂಟ್ ಬೋರ್ಡ್ ತಯಾರಿಸುತ್ತಿದೆ. ಇಲ್ಲಿನ ಸ್ಥಾವರವನ್ನು ವಿಸ್ತರಿಸುವಂತೆ ಮತ್ತು ಹೆಚ್ಚಿನ ಹೂಡಿಕೆ ಮಾಡುವಂತೆ ಹೇಳಲಾಗಿದೆ. ಸೆಮಿಕಂಡಕ್ಟರ್, ವಿದ್ಯುನ್ಮಾನ, ಆರೋಗ್ಯ ಸೇವೆ, ಇಮೇಜಿಂಗ್ ವಲಯಗಳಲ್ಲಿ ಹೆಸರಾಗಿರುವ ಫ್ಯೂಜಿ ಫಿಲಂ ಕಂಪನಿಗೂ ರಾಜ್ಯದಲ್ಲಿ ತಯಾರಿಕಾ ಘಟಕ ಸ್ಥಾಪಿಸುವಂತೆ ಮತ್ತು ಬೆಂಗಳೂರಿನಲ್ಲಿ ಸಂಶೋಧನಾ ಮತ್ತು ಅಭಿವೃದ್ಧಿ ಘಟಕ ನಿರ್ಮಿಸುವಂತೆ ಮನವಿ ಮಾಡಿಕೊಂಡಿದ್ದೇವೆ ಎಂದು ಅವರು ನುಡಿದಿದ್ದಾರೆ.

ವಿದ್ಯುನ್ಮಾನ ವಿನ್ಯಾಸ ಮತ್ತು ಪಿಸಿಬಿ ಜೋಡಣೆಗೆ ಹೆಸರಾಗಿರುವ ಸಿರ್ಮಾ



ಎಸ್.ಜಿ.ಎಸ್ ಕಂಪನಿ ಇತ್ತೀಚೆಗಷ್ಟೇ ಬೊಮ್ಮಸಂದ್ರದಲ್ಲಿ ತನ್ನ ತಯಾರಿಕಾ ಘಟಕದ ಕಾರ್ಯಾರಂಭ ಮಾಡಿದೆ. ಇದರ ಸಾಮರ್ಥ್ಯವನ್ನು ಮತ್ತಷ್ಟು ಹೆಚ್ಚಿಸುವಂತೆ ಕೋರಿದ್ದೇವೆ. ಇದೇ ರೀತಿಯಲ್ಲಿ ಉಳಿದ ಕಂಪನಿಗಳಿಗೂ ಕರ್ನಾಟಕದಲ್ಲಿ ತಯಾರಿಕಾ ಸ್ಥಾವರಗಳನ್ನು ಅಭಿವೃದ್ಧಿ ಪಡಿಸುವಂತೆ ಗನ ಸೆಳೆಯಲಾಗಿದೆ ಎಂದು ಪಾಟೀಲ ಹೇಳಿದ್ದಾರೆ.

ಮಾತುಕತೆಯಲ್ಲಿ ಎಂಎಸ್‌ಎಂಎಲ್ ಕಂಪನಿಯ ಉನ್ನತ ಮಟ್ಟದ ಪ್ರತಿನಿಧಿಗಳಾದ ಜೂಸ್ಟ್ ಸ್ಟೀನೆನ್ ಮತ್ತು ಹರ್ಮನ್ ಬೂಮ್, ನೆಕ್ಸೀರಿಯಾದ ಹಿರಿಯ ನಿರ್ದೇಶಕ ಹ್ಯಾನ್ಸ್ ವ್ಯಾನ್ ರೇಮ್ಡಂಕ್ ಮತ್ತು ಅಕಿಂ ಕೆಂಪ್, 3ಡಿ ಗ್ಲಾಸ್ ನ ಸಿಇಒ ಬಾಬು

ಪೋಷಕರಲ್ಲಿ ಆತಂಕ ಹುಟ್ಟಿಸಿದ ವಿದ್ಯಾರ್ಥಿ ಸಂಘಗಳ ಚುನಾವಣೆ



"ಮುಂಜಾನೆಯ ಮೆರಗು"

ಬೆಂಗಳೂರು, ಸೆ.20– ರಾಜಕಾರಣಿಗಳು ತಮ ಸ್ವಾರ್ಥ ಸಾಧನೆಗಾಗಿ ವಿದ್ಯಾರ್ಥಿಗಳ ಭವಿಷ್ಯದ ಜೊತೆ ಚೆಲ್ಲಾಟವಾಡುವ ಮಾರಕ ನಿರ್ಣಯವೊಂದನ್ನು ಕೈಗೊಳ್ಳುತ್ತಿದ್ದಾರೆ ಎಂಬ ಆತಂಕ ಪೋಷಕರ ವಲಯದಲ್ಲಿ ದಟ್ಟವಾಗಿದೆ. ಭವಿಷ್ಯದ ನಾಯಕತ್ವ ಬೆಳೆ ಸುವ ಕಾರಣಕ್ಕಾಗಿ ಕಾಲೇಜು, ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿ ಸಂಘಗಳಿಗೆ ಚುನಾವಣೆ ನಡೆಸುವ ನಿರ್ಣಯ ಮುಂದಿನ ಶೈಕ್ಷಣಿಕ ವರ್ಷ ದಿಂದ ಅನುಷ್ಠಾನಕ್ಕೆ ಬರಲಿದೆ. ಸಚಿವ ಸಂಪುಟಸಭೆ ಅನುಮೋದನೆಯನ್ನು ನೀಡಿದೆ.

ರಾಜಕೀಯ ಪಕ್ಷಗಳಿಲ್ಲದೇ, ಜಾತಿ ರಹಿತವಾಗಿ ಚುನಾವಣೆಗಳು ನಡೆಯಬೇಕು. ಮಹಿಳೆಯ ಪ್ರಾತಿನಿಧ್ಯಕ್ಕೆ ಅವಕಾಶವಿರಬೇಕು ಎಂಬುದು ಸಂಪುಟಸಭೆಯ ನಿರ್ಣಯದ ಪ್ರಮುಖ ಅಂಶ.

ದೆಹಲಿ ಹಾಗೂ ಕೇರಳದಲ್ಲಿ ಕಾಲೇಜು ಹಾಗೂ ವಿಶ್ವವಿದ್ಯಾನಿಲಯಗಳಲ್ಲಿ ವಿದ್ಯಾರ್ಥಿ ಸಂಸತ್‌ಗಳಿದ್ದು, ಅವುಗಳಿಗೆ ಚುನಾವಣೆ ನಡೆಯುತ್ತಿವೆ. ಉತ್ತರ ಪ್ರದೇಶದಲ್ಲೂ ವಿದ್ಯಾರ್ಥಿ ಸಂಘಗಳ ಚುನಾವಣೆಯನ್ನು ಮರುಸ್ಥಾಪಿಸಬೇಕು ಎಂಬ ಬೇಡಿಕೆ ಇದೆ. ಪ್ರಸ್ತುತ ಎಬಿವಿಪಿ, ಎನ್‌ಎಸ್‌ಯುಐ, ಎಸ್‌ಎಫ್‌ಐ ವಿದ್ಯಾರ್ಥಿ ಸಂಘಗಳು ರಾಜಕೀಯ ಬೆಂಬಲಿತವಾಗಿ ಸಕ್ರಿಯವಾಗಿವೆ.

ದೆಹಲಿ ವಿಶ್ವವಿದ್ಯಾನಿಲಯದ ವಿದ್ಯಾರ್ಥಿ ಸಂಘಗಳ ಮುಖಂಡರ ನಡುವೆ ಹೊಡೆದಾಟ, ಬಡಿದಾಟದಂತಹ ಸಂಘರ್ಷಗಳಾಗಿ, ದೇಶಾದ್ಯಂತ ಚರ್ಚೆಯಾಗಿತ್ತು. ಈ ಮೊದಲು ವಿದ್ಯಾರ್ಥಿ ಸಂಘಗಳ ಚುನಾವಣಾ ಹೆಸರಿನಲ್ಲಿ ಹಿಂಸಾ ಚಟುವಟಿಕೆಗಳು ನಡೆಯುತ್ತಿದ್ದವು. ವಿದ್ಯಾರ್ಥಿಗಳು ಓದಿಗಿಂತಲೂ ಬೇರೆ ಚಟುವಟಿಕೆಗಳಲ್ಲೇ ತೊಡಗಿಸಿಕೊಂಡು ಭವಿಷ್ಯ ಕಳೆದುಕೊಳ್ಳುತ್ತಿದ್ದಾರೆ ಎಂಬ ಆತಂಕದಿಂದ 37 ವರ್ಷಗಳ ಹಿಂದೆ ಚುನಾವಣೆಯನ್ನು ರದ್ದುಗೊಳಿಸಲಾಗಿತ್ತು. ಬಳಿಕ ರಾಜಕೀಯ ಪಕ್ಷಗಳಿಗೆ ತಮ ಕಾರ್ಯಕ್ರಮಗಳಿಗೆ ಜನರನ್ನು ಸೇರಿಸುವುದು, ಆರ್ಥಿಕವಾಗಿ ದುಬಾರಿಯಾಗಿದೆ.

ವಿದ್ಯಾರ್ಥಿ ಸಂಘಗಳಿದ್ದರೆ ಎಲ್ಲದಕ್ಕೂ ಸುಲಭ ಎಂಬ ಲೆಕ್ಕಾಚಾರದಿಂದಾಗಿ ಹಿರಿಯರು ತೆಗೆದುಕೊಂಡ ನಿರ್ಣಯವನ್ನು ಈಗಿನ ರಾಜಕಾರಣಿಗಳು ಬದಿಗಿರಿಸಿ, ಮತ್ತೆ ವಿದ್ಯಾರ್ಥಿ ಸಂಘಗಳಿಗೆ ಚುನಾವಣೆ ನಡೆಸಲು ತಯಾರಿ ಆರಂಭಿಸಿದ್ದಾರೆ. ಇದು ಪೋಷಕರಲ್ಲಿ ಆತಂಕ ಮೂಡಿಸಿದೆ.

ಶೈಕ್ಷಣಿಕ ಸಂಸ್ಥೆಗಳಲ್ಲಿನ ಚುನಾವಣಾ ರಾಜಕೀಯದಿಂದ ತಮ ಮಕ್ಕಳು ಅನ್ಯ ಉದ್ದೇಶಗಳತ್ತ ಮುಖ ಮಾಡಬಹುದು. ಅವರ ಶೈಕ್ಷಣಿಕ ಚಟುವಟಿಕೆಗೆ ತೊಂದರೆಯಾಗಬಹುದು ಎಂಬ ದುಗುಡ ಪೋಷಕರನ್ನು ಕಾಡುತ್ತಿದೆ. ವಿದ್ಯಾರ್ಥಿ ಸಂಘಗಳಿಂದ ರಾಜಕೀಯ ಪಕ್ಷಗಳಿಗೆ ನಾಯಕರು ಸಿಗುತ್ತಾರೆ. ಆದರೆ ದೇಶದ ಅಭಿವೃದ್ಧಿಗೆ ಬೇಕಾದಂತಹ ಎಂಜಿನಿಯರ್‌ಗಳು, ವೈದ್ಯರು, ವಕೀಲರು, ಆಡಿಟರ್‌ಗಳು, ಸಾಹಿತಿಗಳು, ವಿಜ್ಞಾನಿಗಳು, ಪ್ರಜ್ಞಾವಂತರು ದಕ್ಕುತ್ತಾರೆಯೇ ಎಂಬ ಗೊಂದಲಗಳು ಆರಂಭವಾಗಿವೆ.

37 ವರ್ಷಗಳ ಹಿಂದೆ ಭಾರತ ಸಂಕುಚಿತವಾಗಿತ್ತು. ಉದಾರೀಕರಣ, ಜಾಗತೀಕರಣ ಮತ್ತು ಖಾಸಗೀಕರಣಕ್ಕೆ ಮುಕ್ತವಾಗಿರಲಿಲ್ಲ. ಆಗಿನ ಅವಕಾಶಗಳು ಸೀಮಿತವಾಗಿದ್ದವು. ಅನುಭವಗಳು ಹೆಚ್ಚಿನ ಪ್ರಬುದ್ಧತೆಯನ್ನು ತಂದು ಕೊಡುತ್ತಿದ್ದವು. ಆದರೆ ಈಗ ಜಗತ್ತೇ ಅಂಗೈನಲ್ಲಿದೆ. ಪ್ರತಿಭೆ ಮತ್ತು ಪ್ರಬುದ್ಧತೆ ಹೊರತಾಗಿ ಉಳಿದ್ಯಾವ ವಿಚಾರಗಳು ಬದುಕು ಕಟ್ಟಿಕೊಡುತ್ತಿಲ್ಲ. ಇಂತಹ ಸಂದರ್ಭದಲ್ಲಿ ವಿದ್ಯಾರ್ಥಿಗಳನ್ನು ಚುನಾವಣೆಯ ಹೆಸರಿನಲ್ಲಿ ರಾಜಕೀಯ ಚಟುವಟಿಕೆಗಳಿಗೆ ತೊಡಗಿಸಿದರೆ ಭವಿಷ್ಯ ಏನಾಗಬಹುದೆಂಬ ಪ್ರಶ್ನೆಗಳು ಎದ್ದಿವೆ.

ಇಂಟರ್‌ನೆಟ್ ಹಾಗೂ ಸಾಮಾಜಿಕ ಜಾಲತಾಣದ ಹಾವಳಿ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ದೊಡ್ಡ ಪೆಟ್ಟುಕೊಟ್ಟಿದೆ. ಪ್ರೌಢಾವಸ್ಥೆಯ ವಿದ್ಯಾರ್ಥಿಗಳಿಗೆ ಭಿನ್ನವಾದ ವಾಂಛೆಗಳು, ಅಭಿಲಾಷೆಗಳಿರುತ್ತದೆ. ಹೀರೋಗಿರಿ ತೋರಿಸಬೇಕು. ಹೊಡೆದಾಟ–ಬಡಿದಾಟಗಳ ಮೂಲಕ ಡಾನ್ ಎನಿಸಿಕೊಳ್ಳಬೇಕು ಎಂಬ ಹುಚ್ಚು ಬಯಕೆಗಳು ಇತ್ತೀಚಿನ ಯುವ ಸಮುದಾಯದಲ್ಲಿ ಹೆಚ್ಚು ಕಾಣಿಸಿಕೊಳ್ಳುತ್ತಿವೆ.

ನವಯುಗದ ಕ್ರೇಜ್‌ನಲ್ಲಿ ತೇಲುತ್ತಿರುವವರಿಗೆ ರಾಜಕೀಯ ಎಂಬ ಸೋಂಕು ತಗುಲಿದರೆ ವ್ಯಾಸಂಗ ಮತ್ತಷ್ಟು ಅಧೋಗತಿಗಿಳಿಯಬಹುದು ಎಂಬುದು ತಜ್ಞರ ಆತಂಕವಾಗಿದೆ.

ದೇಶದ ಬಹತೇಕ ರಾಜ್ಯಗಳು ವಿದ್ಯಾರ್ಥಿ ಸಂಘಗಳ ಚುನಾವಣೆಯನ್ನು ನಿಷೇಧಿಸಿವೆ. ದೆಹಲಿ ಮತ್ತು ಕೇರಳದಂತಹ ರಾಜ್ಯಗಳಲ್ಲಿರುವ ಪ್ರಜ್ಞಾವಂತಿಕೆ ಬೇರೆಯ ಮಟ್ಟದಲ್ಲಿದೆ. ಆದರೆ ಉಳಿದ ರಾಜ್ಯಗಳಲ್ಲಿನ ವಾತಾವರಣ, ರಾಜಕೀಯ ಪರಿಸ್ಥಿತಿ ಅಷ್ಟೇನೂ ಆರೋಗ್ಯಕರವಾಗಿಲ್ಲ. ಇಂತಹ ಸಂದರ್ಭದಲ್ಲಿ ವಿದ್ಯಾರ್ಥಿ ಸಂಘಗಳ ಚುನಾವಣೆ ಅಗತ್ಯವೇ ಎಂಬ ಪ್ರಶ್ನೆ ಕಾಡುತ್ತಿದೆ.

ರಾಜಕೀಯ ನಾಯಕರು ತಮಿಂದಲೇ ದೇಶ, ತಮಿಂದಲೇ ಜಗತ್ತು ಎಂಬ ಭ್ರಮೆಯಲ್ಲಿದ್ದಾರೆ. ಪ್ರಜಾಪ್ರಭುತ್ವ ಎಂಬ ವ್ಯವಸ್ಥೆಯ ಅವಕಾಶಗಳನ್ನು ದುರುಪಯೋಗಪಡಿಸಿಕೊಂಡು ತಮ ಮನಸ್ಸಿಗೆ ಬಂದಂತೆ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಿದ್ದಾರೆ. ಇದರಿಂದ ಜನರಿಗೆ ಒಳ್ಳೆಯದಾಗುತ್ತದೆ ಎಂಬ ಭ್ರಮಾಧೀನ ವಾತಾವರಣ ಸೃಷ್ಟಿಸುತ್ತಿದ್ದಾರೆ ಎಂಬ ಆರೋಪಗಳಿವೆ.

ವಿದ್ಯಾರ್ಥಿ ಸಂಘಗಳಿಗೆ ಚುನಾವಣೆ ಬೇಕು ಎಂದು 2005ರಲ್ಲೇ ಮಾಜಿ ಮುಖ್ಯ ಚುನಾವಣಾ ಆಯುಕ್ತ ಜೇಮ್ಸ್ ಮೈಕಲ್ ಲಿಂಗ್ಡೋ ಸಮಿತಿ ಕೆಲ ಶಿಫಾರಸುಗಳನ್ನು ಮಾಡಿದೆ. ಜೊತೆಗೆ ಚುನಾವಣಾ ಪರಿಣಾಮಗಳ ಬಗ್ಗೆಯೂ ಆತಂಕಗಳನ್ನು ವ್ಯಕ್ತಪಡಿಸಿದೆ. ಅದನ್ನು ತಡೆಯಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಶಿಫಾರಸು ಮಾಡಿದೆ. ರಾಜ್ಯ ಸರ್ಕಾರದ ವಿದ್ಯಾರ್ಥಿ ಸಂಘದ ಚುನಾವಣಾ ಪ್ರಸ್ತಾವದಲ್ಲಿ ಲಿಂಗ್ಡೋ ಸಮಿತಿಯ ಶಿಫಾರಸುಗಳಿಗಿಂತಲೂ ಭಿನ್ನವಾದ ಹಾದಿಯತ್ತ ಹೆಜ್ಜೆ ಹಾಕುತ್ತಿರುವುದು ಮತ್ತಷ್ಟು ಆತಂಕ ಮೂಡಿಸಿದೆ.

ಬೆಂಗಳೂರಲ್ಲಿ ವ್ಹೀಲಿಂಗ್ ಹುಚ್ಚಾಟಕ್ಕೆ ಅಮಾಯಕ ಡೆಲಿವರಿ ಬಾಯ್ ಬಲಿ



"ಮುಂಜಾನೆಯ ಮೆರಗು"

ಬೆಂಗಳೂರು,ಸೆ.20– ಪ್ರವಾಸಕ್ಕೆ ಹೋಗುತ್ತಿದ್ದ ಟಿಟಿ ವಾಹನಕ್ಕೆ ಅಡ್ಡ ಬಂದ ವ್ಹೀಲಿಂಗ್ ಮಾಡುತ್ತಿದ್ದವರಿಗೆ ಡಿಕ್ಕಿ ಹೊಡೆಯುವುದನ್ನು ತಪ್ಪಿಸಲು ಹೋಗಿ ನಿಯಂತ್ರಣ ತಪ್ಪಿ ರಸ್ತೆ ವಿಭಜಕ ದಾಟಿ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದ ಪರಿಣಾಮ ಒಬ್ಬರು ಮೃತಪಟ್ಟಿರುವ ಘಟನೆ ಜ್ಞಾನಭಾರತಿ ಸಂಚಾರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಇಂದು ಬೆಳಗಿನ ಜಾವ ಸಂಭವಿಸಿದೆ.

ಲಗ್ಗೆರೆ ನಿವಾಸಿ ಮನೋಜ್(25) ಮೃತಪಟ್ಟ ದುರ್ದೈವಿ. ಈತ ವೃತ್ತಿಯಲ್ಲಿ ಡೆಲಿವರಿ ಬಾಯ್. ಆರು ಮಂದಿ ಸ್ನೇಹಿತರು ಲಗ್ಗೆರೆಯಿಂದ ಮೈಸೂರಿಗೆ ಇಂದು ಬೆಳಗಿನ ಜಾವ ಚಾಲಕ ರವಿ ಎಂಬುವರೊಂದಿಗೆ ಟಿಟಿ ವಾಹನದಲ್ಲಿ ಪ್ರಯಾಣ ಬೆಳೆಸಿದ್ದರು. ಇವರೆಲ್ಲರೂ ಡೆಲಿವರಿ ಬಾಯ್‌ಗಳು.

ಬೆಳಗಿನ ಜಾವ 2 ಗಂಟೆ ಸುಮಾರಿನಲ್ಲಿ ಈ ವಾಹನ ರಿಂಗ್‌ರಸ್ತೆಯ ಸುಮನಹಳ್ಳಿ ಸಮೀಪ ಅನ್ನಪೂರ್ಣೇಶ್ವರಿ ನಗರದ ಮಹದೇಶ್ವರ ದೇವಸ್ಥಾನದ ಬಳಿ ಚಾಲಕನ ನಿಯಂತ್ರಣ ತಪ್ಪಿ ವಾಹನ ಡಿವೈಡರ್ ದಾಟಿ ರಸ್ತೆಬದಿಯ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದ ಪರಿಣಾಮ ಚಾಲಕನ ಪಕ್ಕದ ಸೀಟಿನಲ್ಲಿ ಕುಳಿತಿದ್ದ ಮನೋಜ್ ಗಂಭೀರ ಗಾಯಗೊಂಡು ಮೃತಪಟ್ಟಿದ್ದಾರೆ.

ವಾಹನದ ಚಾಲಕ ರವಿ ಎಂಬುವವರಿಗೆ ಗಂಭೀರ ಪೆಟ್ಟಾಗಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸಣ್ಣಪುಟ್ಟ ಗಾಯಗೊಂಡಿರುವ ಇನ್ನುಳಿದ ನಾಲ್ವರು ಹೊರರೋಗಿಗಳಾಗಿ ಚಿಕಿತ್ಸೆ ಪಡೆದು ತೆರಳಿದ್ದಾರೆ.

ಒಂದು ಮೂಲದ ಪ್ರಕಾರ, ಅತೀ ವೇಗ ಹಾಗೂ ಅಜಾಗರೂಕತೆಯಿಂದ ಈ ಅಪಘಾತ ಸಂಭವಿಸಿದೆ ಎಂದು ಹೇಳಲಾಗುತ್ತಿದೆ. ಆದರೆ ಮತ್ತೊಂದು ಮೂಲದ ಪ್ರಕಾರ, ಈ ರಸ್ತೆಯಲ್ಲಿ ವ್ಹೀಲಿಂಗ್ ಮಾಡುತ್ತಿದ್ದವರು ಏಕಾಏಕಿ ಟಿಟಿ ವಾಹನಕ್ಕೆ ಅಡ್ಡ ಬಂದಿದ್ದರಿಂದ ಅವರಿಗೆ ಡಿಕ್ಕಿ ಹೊಡೆಯುವುದನ್ನು ತಪ್ಪಿಸಲು ಮುಂದಾದಾಗ ಈ ಅಪಘಾತ ಸಂಭವಿಸಿದೆ ಎಂದು ಹೇಳಲಾಗುತ್ತಿದೆ. ಈ ಬಗ್ಗೆ ಜ್ಞಾನಭಾರತಿ ಸಂಚಾರಿ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಘಟನಾ ಸ್ಥಳದ ಸುತ್ತಮುತ್ತಲಿನಲ್ಲಿರುವ ಸಿಸಿ ಕ್ಯಾಮೆರಾಗಳನ್ನು ಪರಿಶೀಲಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ.

ಡಾ.ಜಿ. ಪರಮೇಶ್ವರ್ ದಾವಣಗೆರೆಗೆ ಭೇಟಿ



"ಮುಂಜಾನೆಯ ಮೆರಗು"

ದಾವಣಗೆರೆ ಸೆ, 20– ರಾಜ್ಯದ ಉಪಮುಖ್ಯಮಂತ್ರಿ ಡಾ.ಜಿ. ಪರಮೇಶ್ವರ್ ಅವರು ಭಾನುವಾರ ದಾವಣಗೆರೆಗೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಸಮರ್ಥ್ ಶಾಮನೂರು ಹಾಗೂ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಉಪಮುಖ್ಯಮಂತ್ರಿಗಳನ್ನು ಆತ್ಮೀಯವಾಗಿ ಸ್ವಾಗತಿಸಿದರು.

ದಾವಣಗೆರೆಗೆ ಆಗಮಿಸಿದ ಡಾ.ಜಿ. ಪರಮೇಶ್ವರ್ ಅವರು ನಗರದ ಪ್ರಮುಖ ಸ್ಥಳದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು. ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಸಾಮಾಜಿಕ ನ್ಯಾಯ, ಸಮಾನತೆ ಹಾಗೂ ಪ್ರಜಾಪ್ರಭುತ್ವದ ಆಶಯಗಳನ್ನು ಸ್ಮರಿಸಲಾಯಿತು.

ಈ ಸಂದರ್ಭದಲ್ಲಿ ಶಾಸಕ ಸಮರ್ಥ್ ಶಾಮನೂರು, ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಸೇರಿದಂತೆ ಕಾಂಗ್ರೆಸ್ ಪಕ್ಷದ ಹಲವು ಸಚಿವರು, ಶಾಸಕರು, ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು. ಉಪಮುಖ್ಯಮಂತ್ರಿಗಳ ಭೇಟಿಯ ಹಿನ್ನೆಲೆಯಲ್ಲಿ ಸ್ಥಳದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರಿಂದ ಆತ್ಮೀಯ ಸ್ವಾಗತದ ವಾತಾವರಣ ನಿರ್ಮಾಣವಾಗಿತ್ತು.

ಬಳಿಕ ಪಕ್ಷದ ಮುಖಂಡರು ಹಾಗೂ ಜನಪ್ರತಿನಿಧಿಗಳೊಂದಿಗೆ ವಿವಿಧ ಸ್ಥಳೀಯ ವಿಚಾರಗಳು ಮತ್ತು ಜಿಲ್ಲೆಯ ಅಭಿವೃದ್ಧಿ ಕುರಿತು ಚರ್ಚೆಗಳು ನಡೆದವು. ದಾವಣಗೆರೆ ಜಿಲ್ಲೆಗೆ ಸಂಬಂಧಿಸಿದ ಜನಪರ ಹಾಗೂ ಅಭಿವೃದ್ಧಿ ವಿಷಯಗಳ ಕುರಿತು ಜನಪ್ರತಿನಿಧಿಗಳು ಉಪಮುಖ್ಯಮಂತ್ರಿಗಳ ಗಮನ ಸೆಳೆದರು.

ಕಳೆದ 9 ತಿಂಗಳಲ್ಲಿ ರಾಜ್ಯದ ಕಾರಾಗೃಹಗಳಲ್ಲಿ 410 ಮೊಬೈಲ್‌ಗಳು ಪತ್ತೆ



"ಮುಂಜಾನೆಯ ಮೆರಗು"

ಬೆಂಗಳೂರು, ಸೆ.20– ಕಳೆದ ಒಂಬತ್ತು ತಿಂಗಳ ಅವಧಿಯಲ್ಲಿ ರಾಜ್ಯದ ವಿವಿಧ ಕಾರಾಗೃಹಗಳಲ್ಲಿ 410 ಮೊಬೈಲ್‌ಗಳು ಪತ್ತೆಯಾಗಿವೆ. ನಗರದ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹವೊಂದರಲ್ಲೇ 334 ಮೊಬೈಲ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. 2025ರಲ್ಲಿ 148 ಮೊಬೈಲ್‌ಗಳು ಹಾಗೂ 68 ಸಿಮ್‌ಕಾರ್ಡ್‌ಗಳು, 2024ರಲ್ಲಿ 104 ಮೊಬೈಲ್‌ಗಳು ಹಾಗೂ 10 ಸಿಮ್‌ಕಾರ್ಡ್‌ಗಳು ಪತ್ತೆಯಾಗಿದ್ದವು.

ಕಾರಾಗೃಹಗಳ ಪೊಲೀಸ್ ಮಹಾನಿರ್ದೇಶಕರಾಗಿ ಅಲೋಕ್‌ಕುಮಾರ್ ಅವರು ಅಧಿಕಾರ ವಹಿಸಿಕೊಂಡ ಬಳಿಕ ರಾಜ್ಯದ ಎಲ್ಲ ಕಾರಾಗೃಹಗಳಿಗೆ ಭೇಟಿ ನೀಡಿ, ಅಧಿಕಾರಿಗಳೊಂದಿಗೆ ಸಭೆ ನಡೆಸಿದ್ದಾರೆ. ಯಾವುದೇ ಕಾರಣಕ್ಕೂ ಜೈಲಿನೊಳಗೆ ಮೊಬೈಲ್ ಬಳಕೆ, ಮಾದಕ ವಸ್ತುಗಳ ಸೇವನೆ ಸೇರಿದಂತೆ ಅಕ್ರಮ ಚಟುವಟಿಕೆಗಳು ನಡೆಯಬಾರದು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಸ್ಥಳೀಯ ಪೊಲೀಸರು ಕಾರಾಗೃಹಗಳ ಮೇಲೆ ದಾಳಿ ನಡೆಸಿದ ಸಂದರ್ಭದಲ್ಲಿ ಮೊಬೈಲ್‌ಗಳು ಪತ್ತೆಯಾಗಿವೆ. ಇತ್ತೀಚೆಗೆ ಪರಪ್ಪನ ಅಗ್ರಹಾರ ಕಾರಾಗೃಹದಲ್ಲಿ ಮೂರು ಪ್ರಕರಣಗಳು ದಾಖಲಾಗಿವೆ. ಮಂಗಳೂರು ಕಾರಾಗೃಹದಲ್ಲಿ 10 ಹಾಗೂ ಕಲಬುರಗಿ ಕಾರಾಗೃಹದಲ್ಲಿ ಒಂದು ಮೊಬೈಲ್‌ನ್ನು ಪೊಲೀಸರು ಜಪ್ತಿ ಮಾಡಿ, ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ. ಪರಪ್ಪನ ಅಗ್ರಹಾರ ಕಾರಾಗೃಹದಲ್ಲಿ ಮೊಬೈಲ್‌ಗಳು ಪತ್ತೆಯಾದ ಹಿನ್ನೆಲೆಯಲ್ಲಿ ಅಧಿಕಾರಿ ಹಾಗೂ ವಾರ್ಡನ್‌ಗಳನ್ನು ಅಲೋಕ್‌ಕುಮಾರ್ ಅವರು ಅಮಾನತುಗೊಳಿಸಿದ್ದಾರೆ.

ಅಲೋಕ್‌ಕುಮಾರ್ ಅವರು ಕಠಿಣ ಕ್ರಮ ಕೈಗೊಂಡಿದ್ದರೂ ಕಾರಾಗೃಹಗಳೊಳಗೆ ಮೊಬೈಲ್‌ಗಳ ಪ್ರವೇಶ ಮುಂದುವರಿದಿದೆ. ಮೊಬೈಲ್ ಬಳಕೆಯನ್ನು ತಡೆಯಲು ಕಾರಾಗೃಹಗಳಲ್ಲಿ ಜಾಮರ್‌ಗಳನ್ನು ಅಳವಡಿಸಲಾಗಿದ್ದರೂ ಅವುಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂಬ ಆರೋಪಗಳಿವೆ. ಹೀಗಾಗಿ ಕಾರಾಗೃಹಗಳೊಳಗೆ ಮೊಬೈಲ್ ಬಳಕೆ ನಿರಂತರವಾಗಿ ನಡೆಯುತ್ತಿದೆ.

ಜಗಳೂರನ್ನು ಬರಪೀಡಿತ ತಾಲೂಕು ಎಂದು ಘೋಷಿಸಲು ಮನವಿ

ದಾವಣಗೆರೆ ಜಿಲ್ಲೆಯ ಸಮಗ್ರ ಅಭಿವೃದ್ಧಿ ಕುರಿತು ಡಾ. ಜಿ. ಪರಮೇಶ್ವರ್ ಅವರೊಂದಿಗೆ ಚರ್ಚೆ



"ಮುಂಜಾನೆಯ ಮೆರಗು"

ದಾವಣಗೆರೆ ಸೆ, 20– ಉಪಮುಖ್ಯಮಂತ್ರಿ ಹಾಗೂ ಹಿರಿಯ ಸಚಿವರಾದ ಡಾ. ಜಿ. ಪರಮೇಶ್ವರ್ ಅವರು ದಾವಣಗೆರೆಯಲ್ಲಿರುವ ಡಾ. ಪ್ರಭಾ ಮಲ್ಲಿಕಾರ್ಜುನ ಅವರ ನಿವಾಸಕ್ಕೆ ಆತ್ಮೀಯವಾಗಿ ಭೇಟಿ ನೀಡಿದರು.

ಈ ಸಂದರ್ಭದಲ್ಲಿ ಡಾ. ಪ್ರಭಾ ಮಲ್ಲಿಕಾರ್ಜುನ ಅವರು ಡಾ. ಜಿ. ಪರಮೇಶ್ವರ್ ಅವರನ್ನು ಆತ್ಮೀಯವಾಗಿ ಸ್ವಾಗತಿಸಿ, ಉಭಯ ಕುಶಲೋಪರಿ ವಿಚಾರಿಸಿದರು. ಜಿಲ್ಲೆಯ ಪ್ರಸ್ತುತ ಪರಿಸ್ಥಿತಿ, ಜನರ ಸಮಸ್ಯೆಗಳು ಹಾಗೂ ವಿವಿಧ ಅಭಿವೃದ್ಧಿ ವಿಚಾರಗಳ ಕುರಿತು ಸೌಹಾರ್ದಯುತವಾಗಿ ಚರ್ಚೆ ನಡೆಸಲಾಯಿತು.

ವಿಶೇಷವಾಗಿ, ಮಳೆ ಕೊರತೆಯಿಂದಾಗಿ ದಾವಣಗೆರೆ ಜಿಲ್ಲೆಯ ಜಗಳೂರು ತಾಲೂಕಿನಲ್ಲಿ ರೈತರು ಹಾಗೂ ಗ್ರಾಮೀಣ ಜನರು ಎದುರಿಸುತ್ತಿರುವ ತೀವ್ರ ಸಂಕಷ್ಟದ ಕುರಿತು ಡಾ. ಜಿ. ಪರಮೇಶ್ವರ್ ಅವರ ಗಮನ ಸೆಳೆಯಲಾಯಿತು. ತಾಲೂಕಿನಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದೆ ಕೃಷಿ ಚಟುವಟಿಕೆಗಳಿಗೆ ಹಿನ್ನಡೆಯಾಗಿದ್ದು, ಬಿತ್ತನೆ ಮಾಡಿದ ಬೆಳೆಗಳನ್ನು ಉಳಿಸಿಕೊಳ್ಳಲು ರೈತರು ಪರದಾಡುತ್ತಿರುವ ಪರಿಸ್ಥಿತಿ ನಿರ್ಮಾಣವಾಗಿದೆ. ಜಾನುವಾರುಗಳಿಗೆ ಮೇವಿನ ಕೊರತೆ ಹಾಗೂ ಕುಡಿಯುವ ನೀರಿನ ಸಮಸ್ಯೆಯ ಆತಂಕವೂ ಎದುರಾಗಿದೆ ಎಂದು ವಿವರಿಸಲಾಯಿತು.

ಈ ಹಿನ್ನೆಲೆಯಲ್ಲಿ ಜಗಳೂರು ತಾಲೂಕನ್ನು ಬರಪೀಡಿತ ತಾಲೂಕು ಎಂದು ಘೋಷಿಸಿ, ಸಂಕಷ್ಟದಲ್ಲಿರುವ ರೈತರಿಗೆ ಸರ್ಕಾರದಿಂದ ಅಗತ್ಯ ಪರಿಹಾರ ಹಾಗೂ ನೆರವು ಕಲ್ಪಿಸುವಂತೆ ಮನವಿ ಮಾಡಲಾಯಿತು. ಬೆಳೆ ನಷ್ಟದ ಸಮೀಕ್ಷೆ ನಡೆಸಿ ಸೂಕ್ತ ಪರಿಹಾರ, ಬೆಳೆ ವಿಮೆ ಸೌಲಭ್ಯ, ಮೇವಿನ ವ್ಯವಸ್ಥೆ ಹಾಗೂ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಮನವಿ ಮಾಡಲಾಯಿತು.

ಇದೇ ಸಂದರ್ಭದಲ್ಲಿ ದಾವಣಗೆರೆ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದ ಹಲವು ಮಹತ್ವದ ವಿಷಯಗಳ ಕುರಿತು ಚರ್ಚೆ ನಡೆಯಿತು. ಜಿಲ್ಲೆಯ ಗ್ರಾಮೀಣ ಪ್ರದೇಶಗಳ ಅಭಿವೃದ್ಧಿ, ಮೂಲಸೌಕರ್ಯ, ಕುಡಿಯುವ ನೀರು, ನೀರಾವರಿ, ರಸ್ತೆ, ಕೃಷಿ ಹಾಗೂ ಜನಪರ ಯೋಜ

ಜಗಳೂರು ಬರಪೀಡಿತ ತಾಲೂಕು ಘೋಷಣೆಗೆ ಸಂಸದೆ ಡಾ.ಪ್ರಭಾಮಲ್ಲಿಕಾರ್ಜುನ್‌ಗೆ ಬಿ.ಮಹೇಶ್ವರಪ್ಪ ಮನವಿ

"ಮುಂಜಾನೆಯ ಮೆರಗು"

ಜಗಳೂರು ಸೆ, 20– ಮಳೆ ಕೊರತೆಯಿಂದಾಗಿ ಜಗಳೂರು ತಾಲೂಕಿನಲ್ಲಿ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರ್ಪಡೆಗೊಳಿಸಲು ಸರ್ಕಾರದ ಮಟ್ಟದಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ ಅವರಲ್ಲಿ ನಿವೃತ್ತ ಸಮಾಜ ಕಲ್ಯಾಣ ಅಧಿಕಾರಿ ಹಾಗೂ ಕಾಂಗ್ರೆಸ್ ಎಸ್ಸಿ ಘಟಕದ ಅಧ್ಯಕ್ಷ ಬಿ. ಮಹೇಶ್ವರಪ್ಪ ಮನವಿ ಮಾಡಿದರು.

ದಾವಣಗೆರೆಯಲ್ಲಿ ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ ಅವರನ್ನು ಭೇಟಿ ಮಾಡಿದ ಅವರು, ಜಗಳೂರು ತಾಲೂಕಿನಲ್ಲಿ ಪ್ರಸಕ್ತ ವರ್ಷ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದೆ ಕೃಷಿ ಚಟುವಟಿಕೆಗಳಿಗೆ ತೀವ್ರ ಹಿನ್ನಡೆಯಾಗಿದೆ. ಬಿತ್ತನೆ ಮಾಡಿದ ಬೆಳೆಗಳು ಮಳೆಯ



ಕೊರತೆಯಿಂದ ಒಣಗುವ ಸ್ಥಿತಿಯಲ್ಲಿದ್ದು, ರೈತರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ ಎಂದು ಗಮನ ಸೆಳೆದರು.

ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರ್ಪಡೆಗೊಳಿಸುವ ವಿಚಾರವಾಗಿ ಶಾಸಕ ಬಿ. ದೇವೇಂದ್ರಪ್ಪ ಅವರು ನಿರಂತರವಾಗಿ ಸರ್ಕಾರದ ಗಮನಕ್ಕೆ ತಂದು ಪ್ರಯತ್ನ ನಡೆಸುತ್ತಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರು, ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳ ಗಮನಕ್ಕೂ ಈ ವಿಷಯವನ್ನು ಪರಿಣಾಮಕಾರಿಯಾಗಿ ತಂದು, ಜಗಳೂರನ್ನು ಬರಪೀಡಿತ ತಾಲೂಕು ಎಂದು ಘೋಷಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಸದರು ಸಹ ಸರ್ಕಾರದ ಮಟ್ಟದಲ್ಲಿ ಒತ್ತಡ ತರಬೇಕು ಎಂದು ಮನವಿ ಮಾಡಿದರು.

ಬರಪೀಡಿತ ತಾಲೂಕು ಘೋಷಣೆಯಿಂದ ರೈತರಿಗೆ ಬೆಳೆ ನಷ್ಟ ಪರಿಹಾರ, ಬೆಳೆ ವಿಮೆ, ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಸೇರಿದಂತೆ ವಿವಿಧ ರೀತಿಯ ಪರಿಹಾರ ಕ್ರಮಗಳು ದೊರೆಯಲು ಅನುಕೂಲವಾಗಲಿದೆ. ಹೀಗಾಗಿ ರೈತರ ಹಿತದೃಷ್ಟಿಯಿಂದ ಜಗಳೂರಿನ ಪರಿಸ್ಥಿತಿಯನ್ನು ಗಂಭೀರವಾಗಿ ಪರಿಗಣಿಸಿ, ಸರ್ಕಾರದ ಗಮನಕ್ಕೆ ತರುವಂತೆ ಅವರು ಕೋರಿದರು.

ಈ ಸಂದರ್ಭದಲ್ಲಿ ಮಾಜಿ ತಾಲೂಕು ಪಂಚಾಯಿತಿ ಸದಸ್ಯರಾದ ಎಚ್.ಬಿ. ನಿಜಲಿಂಗಪ್ಪ, ಕೊರಟಿಕೆರೆ ಶ್ರೀನಿವಾಸ್, ಧನ್ಯಕುಮಾರ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು

ಬರಗಾಲ ಘೋಷಣೆಗೆ ಆಗ್ರಹ
ಸೆ.21ರಂದು ರಾಷ್ಟ್ರೀಯ ಹೆದ್ದಾರಿ ಬಂದ್

"ಮುಂಜಾನೆಯ ಮೆರಗು"

ಜಗಳೂರು ಸೆ, 20– ತಾಲೂಕನ್ನು ಬರಗಾಲ ಪೀಡಿತ ಪಟ್ಟಿಗೆ ಸೇರ್ಪಡೆಗೊಳಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ (ಹುಚ್ಚವ್ವನಹಳ್ಳಿ ಮಂಜುನಾಥ ಬಣ) ದ ತಾಲೂಕು ಘಟಕದ ವತಿಯಿಂದ ಸೆ.21ರಂದು ಸೋಮವಾರ ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಿ ಪ್ರತಿಭಟನೆ ನಡೆಸಲಾಗುವುದು ಎಂದು ಸಂಘದ ರಾಜ್ಯ ಮುಖಂಡ ಕಾನನಕಟ್ಟೆ ತಿಪ್ಪೇಸ್ವಾಮಿ ತಿಳಿಸಿದ್ದಾರೆ.

ಪಟ್ಟಣದ ತಾಲೂಕು ಕಚೇರಿ ಮುಂಭಾಗ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾಲೂಕಿನ ರೈತರು ಪ್ರಸಕ್ತ ಸಾಲಿನಲ್ಲಿ ಮಳೆ ಕೊರತೆಯಿಂದ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಬೆಳೆಗಳು ಒಣಗುತ್ತಿದ್ದು, ರೈತರ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದೆ. ಹೀಗಾಗಿ ಜಗಳೂರು ತಾಲೂಕನ್ನು ಕೂಡಲೇ ಬರಗಾಲ ಪೀಡಿತ ತಾಲೂಕು ಎಂದು ಘೋಷಿಸಿ, ರೈತರಿಗೆ



ಅಗತ್ಯ ಪರಿಹಾರ ಹಾಗೂ ನೆರವು ಒದಗಿಸಬೇಕು ಎಂದು ಆಗ್ರಹಿಸಿದರು.

ಈ ಹಿನ್ನೆಲೆಯಲ್ಲಿ ಸೆ.21ರಂದು ಕಾನನಕಟ್ಟೆ ಟೋಲ್ ಸಮೀಪ ರೈತ ಸಂಘದ ಪದಾಧಿಕಾರಿಗಳು ಹಾಗೂ ರೈತರು ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಲಿದ್ದಾರೆ. ಪ್ರತಿಭಟನೆಯಲ್ಲಿ ತಾಲೂಕಿನ ಹೆಚ್ಚಿನ ಸಂಖ್ಯೆಯ ರೈತರು ಭಾಗವಹಿಸಿ ಹೋರಾಟಕ್ಕೆ ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ಜಗಳೂರು ಬಂದ್‌ಗೆ ಭಾರತೀಯ ಕಿಸಾನ್ ಸಂಘದ ಸಂಪೂರ್ಣ ಬೆಂಬಲ

"ಮುಂಜಾನೆಯ ಮೆರಗು"

ಜಗಳೂರು ಸೆ, 20– ಜಗಳೂರು ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರ್ಪಡೆಗೊಳಿಸುವಂತೆ ಒತ್ತಾಯಿಸಿ ಸೆ.21ರಂದು ಕರೆ ನೀಡಿರುವ ಜಗಳೂರು ಬಂದ್‌ಗೆ ಭಾರತೀಯ ಕಿಸಾನ್ ಸಂಘದ ತಾಲೂಕು ಘಟಕ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಸಂಘದ ತಾಲೂಕು ಮುಖಂಡ ಧನಂಜಯ್ ತಿಳಿಸಿದ್ದಾರೆ.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸಂಘದ ವತಿಯಿಂದ ಸಭೆ ನಡೆಸಿದ ಬಳಿಕ ಮಾತನಾಡಿದ ಅವರು, ಜಗಳೂರು ರಾಜ್ಯದಲ್ಲೇ ಅತಿ ಹಿಂದುಳಿದ ತಾಲೂಕುಗಳಲ್ಲಿ ಒಂದಾಗಿದ್ದು, ಪ್ರಸಕ್ತ ಸಾಲಿನಲ್ಲಿ ಮಳೆ ಕೊರತೆಯಿಂದ ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವಷ್ಟು ಮಳೆಯಾಗದ ಪರಿಣಾಮ ಬಿತ್ತನೆ ಮಾಡಿರುವ ಬೆಳೆಗಳೂ ಒಣಗುವ ಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು.

ಮಳೆ ಕೊರತೆ, ಅಂತರ್ಜಲ ಕುಸಿತ ಹಾಗೂ ಕೃಷಿ ಚಟುವಟಿಕೆಗಳಿಗೆ ಎದುರಾಗಿರುವ ಸಮಸ್ಯೆಗಳಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿಯೂ ಜಗಳೂರು ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರಿಸುವ ವಿಚಾರದಲ್ಲಿ ಸರ್ಕಾರ ವಿಳಂಬ ಮಾಡುತ್ತಿರುವುದು ರೈತರಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ ಎಂದು ತಿಳಿಸಿದರು.

ಬರಪೀಡಿತ ತಾಲೂಕು ಘೋಷಣೆಯಿಂದ ರೈತರಿಗೆ ಬೆಳೆ ನಷ್ಟ ಪರಿಹಾರ, ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಸೇರಿದಂತೆ ಸರ್ಕಾರದ ವಿವಿಧ ಬರ ಪರಿಹಾರ ಸೌಲಭ್ಯಗಳು ದೊರೆಯಲು ಅನುಕೂಲವಾಗಲಿದೆ. ಆದ್ದರಿಂದ ಸರ್ಕಾರ ಕೂಡಲೇ ಜಗಳೂರು ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರಿಸುವ ಕುರಿತು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.



ಈ ಹಿನ್ನೆಲೆಯಲ್ಲಿ ವಿವಿಧ ಸಂಘಟನೆಗಳು ಹಾಗೂ ಸಾರ್ವಜನಿಕರು ಒಗ್ಗೂಡಿ ಕರೆ ನೀಡಿರುವ ಜಗಳೂರು ಬಂದ್‌ಗೆ ಭಾರತೀಯ ಕಿಸಾನ್ ಸಂಘದ ತಾಲೂಕು ಘಟಕ ಸಂಪೂರ್ಣ ಸಹಕಾರ ಮತ್ತು ಬೆಂಬಲ ನೀಡಲಿದೆ. ರೈತರ ಹಿತದೃಷ್ಟಿಯಿಂದ ಬಂದ್‌ಗೆ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಸಕ್ರಿಯವಾಗಿ ಪಾಲ್ಗೊಳ್ಳಲಿದ್ದಾರೆ ಎಂದು ಧನಂಜಯ್ ಹೇಳಿದರು.


ಜಗಳೂರು ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರಿಸುವವರೆಗೆ ರೈತರ ಹೋರಾಟಕ್ಕೆ ಸಂಘ ಬೆಂಬಲವಾಗಿ ನಿಲ್ಲಲಿದೆ ಎಂದು ಅವರು ಸ್ಪಷ್ಟಪಡಿಸಿದರು.

ಸಭೆಯಲ್ಲಿ ಭಾರತೀಯ ಕಿಸಾನ್ ಸಂಘದ ತಾಲೂಕು ಘಟಕದ ಪದಾಧಿಕಾರಿಗಳು ಹಾಗೂ ರೈತರು ಉಪಸ್ಥಿತರಿದ್ದರು.

ಬಾಲ್ಯ ಗಣೇಶ ಸಮಿತಿಯಿಂದ ವಿವಿಧ ಹೋಮ–ಹವನ, ವಿಶೇಷ ಪೂಜೆ; ಭಕ್ತರಿಗೆ ಮಹಾಪ್ರಸಾದ ವಿತರಣೆ

"ಮುಂಜಾನೆಯ ಮೆರಗು"

ಜಗಳೂರು ಸೆ, 20– ಪಟ್ಟಣದ ತುಮಾಟಿ ಲೇಔಟ್ ಬಡಾವಣೆಯಲ್ಲಿ ಬಾಲ್ಯ ಗಣೇಶ ಸಮಿತಿ ವತಿಯಿಂದ ಶ್ರೀ ಗಣೇಶ ಮೂರ್ತಿಯನ್ನು ಶ್ರದ್ಧಾ–ಭಕ್ತಿಯಿಂದ ಪ್ರತಿಷ್ಠಾಪಿಸಲಾಗಿದ್ದು, ಗಣೇಶೋತ್ಸವದ ಅಂಗವಾಗಿ ಭಾನುವಾರ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ವಿಜೃಂಭಣೆಯಿಂದ ನೆರವೇರಿಸಲಾಯಿತು.



ಗಣೇಶೋತ್ಸವದ ಅಂಗವಾಗಿ ಬೆಳಗ್ಗೆಯಿಂದಲೇ ಬಡಾವಣೆಯಲ್ಲಿ ಧಾರ್ಮಿಕ ವಾತಾವರಣ ನಿರ್ಮಾಣವಾಗಿತ್ತು. ಗಣೇಶ ಸಮಿತಿ ಪದಾಧಿಕಾರಿಗಳು ಹಾಗೂ ಬಡಾವಣೆಯ ನಿವಾಸಿಗಳ ಸಹಕಾರದಲ್ಲಿ ಗಣಪತಿಗೆ ವಿಶೇಷ ಪೂಜೆ, ಅಲಂಕಾರ ಹಾಗೂ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಸಾಮೂಹಿಕವಾಗಿ ಶ್ರೀ ಮಹಾಗಣಪತಿ ಹೋಮ, ರುದ್ರಹೋಮ, ಮಹಾಮೃತ್ಯುಂಜಯ ಹೋಮ, ನವಗ್ರಹ ಹೋಮ, ಶ್ರೀ ಸತ್ಯನಾರಾಯಣ ಸ್ವಾಮಿ ಹೋಮ ಹಾಗೂ ದುರ್ಗಾದೇವಿ ಹೋಮ ಸೇರಿದಂತೆ ವಿವಿಧ ಹೋಮ–ಹವನಗಳನ್ನು ಭಕ್ತಿಭಾವದಿಂದ ನೆರವೇರಿಸಲಾಯಿತು. ವೇದಮಂತ್ರಗಳ ಘೋಷ ಹಾಗೂ ಧಾರ್ಮಿಕ ವಿಧಿವಿಧಾನಗಳಿಂದ ಬಡಾವಣೆಯಲ್ಲಿ ಭಕ್ತಿಯ ವಾತಾವರಣ ಕಳೆಗಟ್ಟಿತ್ತು.

ಗಣೇಶೋತ್ಸವದ ಅಂಗವಾಗಿ ನಡೆದ ಪೂಜಾ ಕಾರ್ಯಕ್ರಮಗಳಲ್ಲಿ ಬಡಾವಣೆಯ ಮಹಿಳೆಯರು, ಮಕ್ಕಳು, ಯುವಕರು ಹಾಗೂ ಹಿರಿಯರು ಸೇರಿದಂತೆ ನೂರಾರು ಭಕ್ತರು ಭಾಗವಹಿಸಿ ವಿಶೇಷ ಪೂಜೆ ಸಲ್ಲಿಸಿದರು. ಕುಟುಂಬ ಸಮೇತರಾಗಿ ಆಗಮಿಸಿದ ಭಕ್ತರು ಗಣಪತಿ ದರ್ಶನ ಪಡೆದು, ತಮ್ಮ ಇಷ್ಟಾರ್ಥಗಳು ಈಡೇರಲಿ ಎಂದು ಪ್ರಾರ್ಥಿಸಿದರು.

ಹೋಮ–ಹವನಗಳ ಪೂರ್ಣಾಹುತಿ ಬಳಿಕ ಭಕ್ತರಿಗೆ ಮಹಾಪ್ರಸಾದ ವಿತರಣೆ ಮಾಡಲಾಯಿತು. ಸಮಿತಿಯ ವತಿಯಿಂದ ಭಕ್ತರಿಗೆ ಪ್ರಸಾದದ ವ್ಯವಸ್ಥೆ ಮಾಡಲಾಗಿದ್ದು, ಬಡಾವಣೆಯ ನಿವಾಸಿಗಳು ಹಾಗೂ ಸಾರ್ವಜನಿಕರು ಪ್ರಸಾದ ಸ್ವೀಕರಿಸಿದರು.

ಗಣೇಶೋತ್ಸವವು ಕೇವಲ ಧಾರ್ಮಿಕ ಆಚರಣೆಗೆ ಸೀಮಿತವಾಗದೆ, ಬಡಾವಣೆಯ ಜನರನ್ನು ಒಗ್ಗೂಡಿಸುವ ಹಾಗೂ ಪರಸ್ಪರ ಸೌಹಾರ್ದ ಬೆಳೆಸುವ ಕಾರ್ಯಕ್ರಮವಾಗಿ ರೂಪುಗೊಂಡಿರುವುದು ವಿಶೇಷವಾಗಿತ್ತು. ಮಕ್ಕಳಿಂದ ಹಿಡಿದು ಹಿರಿಯರವರೆಗೆ ಎಲ್ಲರೂ ಉತ್ಸಾಹದಿಂದ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಸಮಿತಿಯ ಪದಾಧಿಕಾರಿಗಳು ಮಾತನಾಡಿ, ಪ್ರತಿವರ್ಷದಂತೆ ಈ ಬಾರಿಯೂ ಗಣೇಶೋತ್ಸವವನ್ನು ಶ್ರದ್ಧಾ–ಭಕ್ತಿಯಿಂದ ಆಚರಿಸಲಾಗುತ್ತಿದ್ದು, ಸಾರ್ವಜನಿಕರ ಸಹಕಾರದಿಂದ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಮುಂದಿನ ದಿನಗಳಲ್ಲಿಯೂ ಎಲ್ಲರ ಸಹಕಾರದೊಂದಿಗೆ ಗಣೇಶೋತ್ಸವವನ್ನು ಯಶಸ್ವಿಯಾಗಿ ಆಚರಿಸುವುದಾಗಿ ತಿಳಿಸಿದರು.

ಕಾರ್ಯಕ್ರಮದ ಸಂದರ್ಭದಲ್ಲಿ ಬಾಲ್ಯ ಗಣೇಶ ಸಮಿತಿಯ ಪದಾಧಿಕಾರಿಗಳು, ಸದಸ್ಯರು, ಬಡಾವಣೆಯ ನಿವಾಸಿಗಳು ಹಾಗೂ ಭಕ್ತರು ಉಪಸ್ಥಿತರಿದ್ದರು.

ಜಗಳೂರು ಬಂದ್‌ಗೆ ಸ್ವಾಗತ; ಬರ ಘೋಷಣೆ ವಿಳಂಬಕ್ಕೆ ಕೇಂದ್ರದ ನಿಯಮಗಳೇ ಕಾರಣ: ಎಂ.ಡಿ. ಕೀರ್ತಿಕುಮಾರ್

"ಮುಂಜಾನೆಯ ಮೆರಗು"

ಜಗಳೂರು ಸೆ, 20– ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರ್ಪಡೆಗೊಳಿಸುವಂತೆ ಹಾಗೂ ಭದ್ರಾ ಮೇಲ್ದಂಡೆ ಯೋಜನೆಯ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಕೈಗೊಳ್ಳುವಂತೆ ಒತ್ತಾಯಿಸಿ ಭಾರತೀಯ ಜನತಾ ಪಕ್ಷದ ಜಗಳೂರು ಮಂಡಲದ ವತಿಯಿಂದ ಸೆ.21ರಂದು ಸೋಮವಾರ ಕರೆ ನೀಡಿರುವ ಜಗಳೂರು ಬಂದ್‌ಗೆ ಸ್ವಾಗತವಿದೆ ಎಂದು ಕೆಪಿಸಿಸಿ ಎಸ್ಟಿ ಘಟಕದ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್ ತಿಳಿಸಿದ್ದಾರೆ.

ಭಾನುವಾರ ಸಾಮಾಜಿಕ ಜಾಲತಾಣದಲ್ಲಿ ಅವರು ಮಾತನಾಡಿರುವ ವಿಡಿಯೋ ವೈರಲ್ ಆಗಿದ್ದು, ಅದರಲ್ಲಿ ಜಗಳೂರು ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರಿಸುವ ಪ್ರಕ್ರಿಯೆ ವಿಳಂಬವಾಗಲು ಕೇಂದ್ರ ಸರ್ಕಾರದ ಬರ ಘೋಷಣೆಗೆ ಸಂಬಂಧಿಸಿದ ಕಠಿಣ ಮಾನದಂಡಗಳು ಕಾರಣವಾಗಿವೆ ಎಂದು ಹೇಳಿದ್ದಾರೆ.

ಜಗಳೂರು ವಿಧಾನಸಭಾ ಕ್ಷೇತ್ರದ ಶಾಸಕ ಬಿ.ದೇವೇಂದ್ರಪ್ಪ ಅವರು ಕಳೆದ 20ಕ್ಕೂ ಹೆಚ್ಚು ದಿನಗಳಿಂದ ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರ್ಪಡೆಗೊಳಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿ, ಸಚಿವರು ಹಾಗೂ ಸಂಬಂಧಿಸಿದ ಅಧಿಕಾರಿಗಳನ್ನು ಭೇಟಿ ಮಾಡಿ ನಿರಂತರವಾಗಿ ಮನವಿ ಸಲ್ಲಿಸುತ್ತಿದ್ದಾರೆ. ಈ ವಿಚಾರದಲ್ಲಿ ಸರ್ಕಾರದ ಮಟ್ಟದಲ್ಲಿ ಪ್ರಯತ್ನಗಳು



ನಡೆಯುತ್ತಿವೆ. ಸಚಿವರು ನೀಡಿರುವ ಮಾಹಿತಿಯಂತೆ ಸೆ.22 ಅಥವಾ 23ರಂದು ಪ್ರಕಟವಾಗಲಿರುವ ಮುಂದಿನ ಬರಪೀಡಿತ ತಾಲೂಕುಗಳ ಪಟ್ಟಿಯಲ್ಲಿ ಜಗಳೂರು ಸೇರ್ಪಡೆಯಾಗುವ ನಿರೀಕ್ಷೆಯಿದೆ ಎಂದು ಅವರು ತಿಳಿಸಿದ್ದಾರೆ.

5,300 ಕೋಟಿ ಅನುದಾನ ಎಲ್ಲಿ?

ಭದ್ರಾ ಮೇಲ್ದಂಡೆ ನೀರಾವರಿ ಯೋಜನೆಗೆ 2023ರ ಕೇಂದ್ರ ಬಜೆಟ್‌ನಲ್ಲಿ ಅಂದಿನ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು 5,300 ಕೋಟಿ ಅನುದಾನ ಘೋಷಿಸಿದ್ದರು. ಆದರೆ ಇದುವರೆಗೂ ಕೇಂದ್ರದಿಂದ ಈ ಮೊತ್ತ ಬಿಡುಗಡೆಯಾಗಿಲ್ಲ. ಹೀಗಿರುವಾಗ ಯೋಜನೆಯ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸುವಂತೆ ರಾಜ್ಯ ಸರ್ಕಾರವನ್ನು ಮಾತ್ರ ಪ್ರಶ್ನಿಸುವ ಬಿಜೆಪಿಯವರಿಗೆ ಈ ಬಗ್ಗೆ ಪ್ರಶ್ನಿಸುವ ನೈತಿಕ ಹಕ್ಕು ಇದೆಯೇ ಎಂದು ಎಂ.ಡಿ. ಕೀರ್ತಿಕುಮಾರ್ ಪ್ರಶ್ನಿಸಿದ್ದಾರೆ.


ಜಗಳೂರು ತಾಲೂಕು ಬರಪೀಡಿತ ಪಟ್ಟಿಗೆ ಸೇರ್ಪಡೆಯಾಗಬೇಕು ಎಂಬುದು ಎಲ್ಲರ ಒತ್ತಾಯವಾಗಿದ್ದು, ರೈತರ ಸಂಕಷ್ಟಕ್ಕೆ ಸ್ಪಂದಿಸುವುದು ಅಗತ್ಯ. ಈ ನಿಟ್ಟಿನಲ್ಲಿ ಬಂದ್ ಸೇರಿದಂತೆ ರೈತರ ಹಿತದೃಷ್ಟಿಯಿಂದ ನಡೆಯುವ ಹೋರಾಟಗಳಿಗೆ ತಮ್ಮ ಬೆಂಬಲವಿದೆ ಎಂದು ಅವರು ತಿಳಿಸಿದ್ದಾರೆ.



ರೈತರ ಜಮೀನುಗಳಿಗೆ ಭೇಟಿ ನೀಡಿ ಪರಿಶೀಲನೆ

ಜಗಳೂರು ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರ್ಪಡೆಗೊಳಿಸಲು ಶಾಸಕ ಬಿ.ದೇವೇಂದ್ರಪ್ಪ ಅವರು ಹಗಲಿರುಳು ಶ್ರಮಿಸುತ್ತಿದ್ದಾರೆ. ಅಧಿಕಾರಿಗಳು ಹಾಗೂ ಸಚಿವರನ್ನು ಭೇಟಿ ಮಾಡಿ ಸರ್ಕಾರದ ಗಮನಕ್ಕೆ ಸಮಸ್ಯೆಯನ್ನು ತರುವುದರ ಜತೆಗೆ, ರೈತರ ಜಮೀನುಗಳಿಗೆ ಭೇಟಿ ನೀಡಿ ಬೆಳೆಗಳ ಸ್ಥಿತಿಗತಿಯನ್ನು ಪರಿಶೀಲಿಸಿ ರೈತರಿಗೆ ಧೈರ್ಯ ತುಂಬುವ ಕೆಲಸ ಮಾಡುತ್ತಿದ್ದಾರೆ ಎಂದು ಎಂ.ಡಿ. ಕೀರ್ತಿಕುಮಾರ್ ತಿಳಿಸಿದ್ದಾರೆ.

--- ಎಂ.ಡಿ. ಕೀರ್ತಿಕುಮಾರ್
ಪ್ರಧಾನ ಕಾರ್ಯದರ್ಶಿ, ಕೆಪಿಸಿಸಿ ಎಸ್ಟಿ ಘಟಕ



"ಮುಂಜಾನೆಯ ಮೆರಗು"

ಜಗಳೂರು ಸೆ, 20– ತಾಲೂಕಿನ ಕಲ್ಲೇದೇವರಪುರ ಗ್ರಾಮದ ಆರಾಧ್ಯ ದೈವ ಶ್ರೀ ಕಲ್ಲೇಶ್ವರ ಸ್ವಾಮಿಗೆ ಭಾನುವಾರ ವಿಶೇಷ ಪುಷ್ಪಾಲಂಕಾರ ನೆರವೇರಿಸಲಾಯಿತು. ವಿವಿಧ ಬಗೆಯ ಬಣ್ಣಬಣ್ಣದ ಹೂವುಗಳಿಂದ ಸ್ವಾಮಿಯ ಮೂರ್ತಿಯನ್ನು ಅಲಂಕರಿಸಲಾಗಿದ್ದು, ದೇವಾಲಯದ ಆವರಣ ಭಕ್ತಿಮಯ ವಾತಾವರಣದಿಂದ ಕಂಗೊಳಿಸಿತು.

ಮಾ. ನಾಗರಾಜ್‌ಗೆ ಅಭಿನಂದನೆ: ಸೆ.26ರಂದು ಜಿಲ್ಲಾ ಕುರುಬ ಸಮಾಜದಿಂದ ದಾವಣಗೆರೆಯಲ್ಲಿ ಕಾರ್ಯಕ್ರಮ

"ಮುಂಜಾನೆಯ ಮೆರಗು"

ಜಗಳೂರು ಸೆ, 20– ರಾಜ್ಯಸಭಾ ಸದಸ್ಯರಾಗಿ ಹಾಗೂ ಭಾರತೀಯ ಜನತಾ ಪಕ್ಷದ ರಾಷ್ಟ್ರೀಯ ಉಪಾಧ್ಯಕ್ಷರಾಗಿ ಆಯ್ಕೆಯಾಗಿರುವ ಮಾ. ನಾಗರಾಜ್ ಅವರನ್ನು ಜಿಲ್ಲಾ ಕುರುಬ ಸಮಾಜದ ವತಿಯಿಂದ ಸೆ.26ರಂದು ದಾವಣಗೆರೆಯಲ್ಲಿ ಅಭಿನಂದಿಸಲಾಗುವುದು ಎಂದು ಜಿಲ್ಲಾ ಕುರುಬ ಸಮಾಜದ ಮುಖಂಡ ಚಿಕ್ಕ ಉಜ್ಜಿನಿ ಆಂಜಿನಪ್ಪ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶನಿವಾರ ಜಿಲ್ಲಾ ಹಾಗೂ ತಾಲೂಕು ಕುರುಬ ಸಮಾಜದ ವತಿಯಿಂದ ಆಯೋಜಿಸಿದ್ದ ಪೂರ್ವಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಮಾ. ನಾಗರಾಜ್ ಅವರು ರಾಜ್ಯಸಭಾ ಸದಸ್ಯರಾಗಿ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ ಸಮಾಜದ ವತಿಯಿಂದ ಅಭಿಮಾನಪೂರ್ವಕ ಅಭಿನಂದನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಸೆ.26ರಂದು ಶನಿವಾರ ಬೆಳಗ್ಗೆ 10.30ಕ್ಕೆ ದಾವಣಗೆರೆಯ ಎಂಸಿಸಿ 'ಎ' ಬ್ಲಾಕ್‌ನಲ್ಲಿರುವ ದಾವಣಗೆರೆ–ಹರಿಹರ ಅರ್ಬನ್ ಬ್ಯಾಂಕ್ ಸಮುದಾಯ ಭವನದಲ್ಲಿ ಕಾರ್ಯಕ್ರಮ ನಡೆಯಲಿದೆ. ಕುರುಬ ಸಮಾಜದ ನಿರಂಜನಾನಂದಪುರಿ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಸಮಾರಂಭ ಜರುಗಲ